ಗುರುವಾರ 05.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 136

Digital Varthe Kannada Daily
Volume 01 - Issue 136
Thursday , 05.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ


ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಟ್ಯಾಟೂ ಹುಚ್ಚಿಗೆ ದೃಷ್ಟಿ ಕಳೆದುಕೊಂಡ ಬೆಂಗಳೂರಿನ ಯುವಕ





**ಬೆಂಗಳೂರು:** ಟ್ಯಾಟೂ ಅಥವಾ ಹಚ್ಚೆ ಹಾಕಿಸಿಕೊಳ್ಳುವುದು ಇಂದಿನ ಯುವಪೀಳಿಗೆಯಲ್ಲಿ ಕೇವಲ ಫ್ಯಾಷನ್ ಮಾತ್ರವಲ್ಲ, ಕೆಲವೊಮ್ಮೆ ವ್ಯಕ್ತಿತ್ವ ಪ್ರದರ್ಶನದ ಸಾಧನ ʼವಾಗಿಯೂ ಮಾರ್ಪಟ್ಟಿದೆ. ಆದರೆ ಈ ಕ್ರೇಜ್ ಮಿತಿ ಮೀರಿದಾಗ ಎಷ್ಟು ಭೀಕರ ಪರಿಣಾಮ ಎದುರಾಗಬಹುದು ಎಂಬುದಕ್ಕೆ ಬೆಂಗಳೂರಿನಲ್ಲಿ ನಡೆದ ಈ ಘಟನೆ ಕಣ್ಣಾರೆ ಸಾಕ್ಷಿಯಾಗಿದೆ. ವಿಭಿನ್ನವಾಗಿ ಕಾಣಿಸಿಕೊಳ್ಳಬೇಕು, ಎಲ್ಲರಿಗಿಂತ ವಿಭಿನ್ನ ದಾಖಲೆ ಬರೆಯಬೇಕು ಎಂಬ ಅತಿಯಾದ ಹಂಬಲದಲ್ಲಿ ಯುವಕನೊಬ್ಬ ತನ್ನ ಕಣ್ಣುಗುಡ್ಡೆಗಳ ಮೇಲೆ ಹಚ್ಚೆ ಹಾಕಿಸಿಕೊಳ್ಳಲು ಮುಂದಾಗಿ, ಕೊನೆಗೆ ಶಾಶ್ವತವಾಗಿ ದೃಷ್ಟಿ ಕಳೆದುಕೊಂಡಿದ್ದಾನೆ.

ಐಟಿಐ ಮೆಕ್ಯಾನಿಕಲ್ ಎಂಜಿನಿಯರಿಂಗ್ ಪದವಿ ಮುಗಿಸಿರುವ ಜಗದೀಶ್ ಎಂಬ ಯುವಕ ವೃತ್ತಿಯಿಂದಲೇ ಟ್ಯಾಟೂ ಕಲಾವಿದ. ಹಚ್ಚೆ ಮತ್ತು ದೇಹ ಚುಚ್ಚುವಿಕೆ (ಪಿಯರ್ಸಿಂಗ್) ವಿಷಯದಲ್ಲಿ ಹೆಚ್ಚಿನ ಪರಿಣತಿ ಪಡೆಯುವ ಉದ್ದೇಶದಿಂದ ನೇಪಾಳಕ್ಕೆ ತೆರಳಿ ವಿಶೇಷ ತರಬೇತಿಯನ್ನು ಕೂಡ ಪಡೆದಿದ್ದಾನೆ. ಭಾರತದಲ್ಲಿ ಮೊದಲ ಬಾರಿಗೆ ಕಣ್ಣುಗುಡ್ಡೆಗೆ ಹಚ್ಚೆ ಹಾಕಿಸಿಕೊಂಡ ವ್ಯಕ್ತಿ ಎಂಬ ಅಪಾಯಕಾರಿ 'ದಾಖಲೆ' ಬರೆಯಬೇಕೆಂಬ ಆಸೆ ಜಗದೀಶ್‌ನನ್ನು ಈ ಅತಿದೊಡ್ಡ ಸಾಹಸಕ್ಕೆ ದೂಡಿದೆ.

ಬಾಲ್ಯದಿಂದಲೇ ಎಲ್ಲ–ರಿಗಿಂತ ವಿಭಿನ್ನವಾಗಿ ಕಾಣಬೇಕು, ಹೊಸದನ್ನು ಮಾಡಬೇಕು ಎಂಬ ಹಂಬಲ ಹೊಂದಿದ್ದ ಜಗದೀಶ್, ಈ ಬಾರಿ ಅತ್ಯಂತ ಅಪಾಯಕಾರಿ ದಾ–ರಿಯನ್ನು ಆರಿಸಿಕೊಂಡಿದ್ದಾನೆ. ಕಣ್ಣಿನ ಅತ್ಯಂತ ಸೂಕ್ಷ್ಮ ಮತ್ತು ಸಂವೇದನಾಶೀಲ ಭಾಗಗಳಿಗೆ ನೇರವಾಗಿ ಶಾಯಿಯನ್ನು ಚುಚ್ಚುವ ಈ ಪ್ರಕ್ರಿಯೆ ವೈದ್ಯಕೀಯವಾಗಿ ಅತ್ಯಂತ ಅಪಾಯಕಾರಿಯಾಗಿದೆ.

**2 ಲಕ್ಷ ರೂ. ವೆಚ್ಚ, 4 ಗಂಟೆಗಳ ಅಪಾಯಕಾರಿ ಪ್ರಕ್ರಿಯೆ:**ಕಣ್ಣುಗುಡ್ಡೆ ಹಚ್ಚೆಯ ಈ ಪ್ರಕ್ರಿಯೆ ಸುಮಾರು 3 ರಿಂದ 4 ಗಂಟೆಗಳ ಕಾಲ ನಡೆದಿದ್ದು, ಈ ಒಂದು ಪ್ರಯೋಗಕ್ಕಾಗಿ ಜಗದೀಶ್ ಬರೋಬ್ಬರಿ 2 ಲಕ್ಷ ರೂಪಾಯಿಗಳನ್ನು ಖರ್ಚು ಮಾಡಿದ್ದಾನೆ. ವಿಶೇಷವೆಂದರೆ, ಈ ಕೆಲಸಕ್ಕೆ ಮುಂದಾಗುವ ಮುನ್ನ ತಜ್ಞರು ಹಾಗೂ ವೈದ್ಯರು ಸ್ಪಷ್ಟವಾಗಿ ಎಚ್ಚರಿಕೆ ನೀಡಿದ್ದರು. "ಇದು 50–50 ಅಪಾಯಕರ ಪ್ರಯೋಗ. ದೃಷ್ಟಿ ಕಳೆದುಕೊಳ್ಳುವ ಸಾಧ್ಯತೆ ಶೇಕಡಾ 100 ಇದೆ" ಎಂದು ತಿಳಿಸಿದರೂ, ಜಗದೀಶ್ ತನ್ನ ನಿರ್ಧಾರದಿಂದ ಹಿಂದೆ ಸರಿಯಲಿಲ್ಲ.

ವೈದ್ಯಕೀಯ ತಜ್ಞರ ಪ್ರಕಾರ, ಕಣ್ಣುಗುಡ್ಡೆಗೆ ಹಚ್ಚೆ ಹಾಕಿಸಿಕೊಳ್ಳುವಿಕೆ ಮಾನವ ದೇಹದ ಮೇಲೆ ಮಾಡಬಹುದಾದ ಅತ್ಯಂತ ಮಾರಣಾಂತಿಕ ಪ್ರಯೋಗಗಳಲ್ಲಿ ಒಂದಾಗಿದೆ. ಶಾಯಿಯಲ್ಲಿ ಇರುವ ರಾಸಾಯನಿಕ ಅಂಶಗಳು ಕಣ್ಣಿನ ನರಗಳಿಗೆ ತೀವ್ರ ಹಾನಿ ಉಂಟುಮಾಡುತ್ತವೆ. ಒಮ್ಮೆ ಹಾನಿಗೊಳಗಾದ ನರಗಳು ಮತ್ತೆ ಚೇತ–ರಿಸಿಕೊಳ್ಳುವ ಸಾಧ್ಯತೆ ಬಹಳ ಕಡಿಮೆ.

ಜಗದೀಶ್ ಪ್ರಕರಣದಲ್ಲೂ ಇದೇ ಸಂಭವಿಸಿದೆ. ಹಚ್ಚೆ ಪ್ರಕ್ರಿಯೆ ಮುಗಿದ ಕೆಲವೇ ದಿನಗಳಲ್ಲಿ ಕಣ್ಣುಗಳಲ್ಲಿ ತೀವ್ರ ಉರಿ, ಅಸಹನೀಯ ನೋವು ಹಾಗೂ ಸೋಂಕು ಕಾಣಿಸಿಕೊಂಡಿದೆ. ಹಲವು ಚಿಕಿತ್ಸೆ ಪ್ರಯತ್ನಗಳಾದರೂ ಪ್ರಯೋಜನವಾಗದೆ, ಇದೀಗ ಆತ ತನ್ನ ಎರಡೂ ಕಣ್ಣುಗಳ ದೃಷ್ಟಿಯನ್ನು ಸಂಪೂರ್ಣವಾಗಿ ಕಳೆದುಕೊಂಡಿದ್ದಾನೆ.

**ಸಾರ್ವಜನಿಕರಿಗೆ ಎಚ್ಚ–ರಿಕೆ:**ಸಾಮಾಜಿಕ ಜಾಲತಾಣಗಳಲ್ಲಿ ಫೇಮಸ್ ಆಗಬೇಕು, ಎಲ್ಲರ ಗಮನ ಸೆಳೆಯಬೇಕು ಅಥವಾ ವಿಭಿನ್ನವಾಗಿ ಕಾಣಬೇಕು ಎಂಬ ಕಾರಣಕ್ಕೆ ದೇಹದ ಅತ್ಯಂತ ಪ್ರಮುಖ ಅಂಗಗಳ ಮೇಲೆ ಇಂತಹ ಅಪಾಯಕಾರಿ ಪ್ರಯೋಗಗಳನ್ನು ಮಾಡುವುದು ಎಷ್ಟು ಅಪಾಯಕಾ–ರಿಯೆಂಬುದನ್ನು ಈ ಘಟನೆ ಸ್ಪಷ್ಟವಾಗಿ ತೋರಿಸುತ್ತದೆ. ಕ್ಷಣಿಕ ಪ್ರಸಿದ್ಧಿ ಅಥವಾ ದಾಖಲೆಗಳ ಹಿಂದೆ ಓಡುವ ಹವ್ಯಾಸ ಜೀವಪೂರ್ತಿ ಪಶ್ಚಾತ್ತಾಪಕ್ಕೆ ಕಾರಣವಾಗಬಹುದು ಎಂಬುದಕ್ಕೆ ಇದು ದೊಡ್ಡ ಎಚ್ಚರಿಕೆಯಾಗಿದೆ.

ಪೋಷಕರು ಕೂಡ ತಮ್ಮ ಮಕ್ಕಳು ಅನುಸರಿಸುವ ಟ್ರೆಂಡ್‌ಗಳು ಮತ್ತು ಹವ್ಯಾಸಗಳ ಬಗ್ಗೆ ಜಾಗರೂಕರಾಗಬೇಕಾದ ಅಗತ್ಯವಿದೆ. ಫ್ಯಾಷನ್ ಮತ್ತು ಸುರಕ್ಷತೆ ನಡುವಿನ ಗಡಿಯನ್ನು ಮರೆತರೆ ಅದರ ಪರಿಣಾಮ ಎಷ್ಟು ಭೀಕರವಾಗಬಹುದು ಎಂಬುದನ್ನು ಈ ಘಟನೆ ನಮಗೆ ನೆನಪಿಸುತ್ತದೆ.

## ನೇಪಾಳಿ ಯುವತಿಗಾಗಿ ನಡೆದ ಗಲಾಟೆಯಲ್ಲಿ ನಡೆದಿದ್ದು ರಕ್ತಪಾತ!




**ಬೆಂಗಳೂರು:** ಯುವತಿಯ ವಿಚಾರಕ್ಕೆ ಸಂಬಂಧಿಸಿದಂತೆ ಆರಂಭವಾದ ಸಣ್ಣ ಗಲಾಟೆ ಕ್ಷಣಾರ್ಧದಲ್ಲಿ ವಿಕೋಪಕ್ಕೆ ತಿರುಗಿ, ಯುವಕನೊಬ್ಬನಿಗೆ ಚಾಕು ಇರಿದಿರುವ ಭೀಕರ ಘಟನೆ ಬೆಂಗಳೂರಿನ ಕೆ. ಆರ್. ಪುರ ಪೊಲೀಸ್ ಠಾಣಾ ವ್ಯಾಪ್ತಿಯ ದೇವಸಂದ್ರದಲ್ಲಿ ನಡೆದಿದೆ. ಈ ಘಟನೆಯಲ್ಲಿ ರೋಷನ್ ಎಂಬ ಯುವಕ ಗಂಭೀರವಾಗಿ ಗಾಯಗೊಂಡಿದ್ದು, ಆತನ ಸ್ಥಿತಿ ಸದ್ಯ ಚಿಂತಾಜನಕವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ. ಘಟನೆಯ ಬಳಿಕ ಪ್ರಮುಖ ಆರೋಪಿ ಮಾಮು ಸೇರಿದಂತೆ ಆತನ ಸಹಚರರು ತಲೆಮರೆಸಿಕೊಂಡಿದ್ದು, ಪೊಲೀಸರು ಅವರ ಪತ್ತೆಗೆ ಬಲೆ ಬೀಸಿದ್ದಾರೆ.

ಘಟನೆ ಸಂಬಂಧ ಕೆ.ಆರ್. ಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳಿಗಾಗಿ ಶೋಧ ಕಾರ್ಯ ತೀವ್ರಗೊಳಿಸಲಾಗಿದೆ.

ಪೊಲೀಸ್ ಮೂಲಗಳ ಪ್ರಕಾರ, ಗಾಯಗೊಂಡ ರೋಷನ್ ಆಟೋ ಚಾಲಕನಾಗಿ ಜೀವನ ನಡೆಸುತ್ತಿದ್ದ. ಇತ್ತೀಚಿನ ದಿನಗಳಲ್ಲಿ ಆತ ನೇಪಾಳಿ ಮೂಲದ ಯುವತಿಯೊಬ್ಬಳೊಂದಿಗೆ ಹೆಚ್ಚು ಸಂಪರ್ಕ ಹೊಂದಿದ್ದ ಎನ್ನಲಾಗಿದೆ. ಇದೇ ಯುವತಿಯ ವಿಚಾರಕ್ಕೆ ಸಂಬಂಧಿಸಿದಂತೆ ಆರೋಪಿ ಮಾಮು ಮತ್ತು ರೋಷನ್ ನಡುವೆ ಮನಸ್ತಾಪ ಉಂಟಾಗಿತ್ತು. ಮಾಮುಗೂ ಸಹ ಆ ಯುವತಿಯ ಮೇಲೆ ಪ್ರೀತಿ ಇದ್ದು, ಈ ಕಾರಣದಿಂದ ಇಬ್ಬರ ನಡುವೆ ಅಸಮಾಧಾನ ಹೆಚ್ಚಾಗಿತ್ತು ಎಂದು ಹೇಳಲಾಗಿದೆ.

ರೋಷನ್ ಮತ್ತು ಮಾಮು ಪರಸ್ಪರ ಪರಿಚಯಸ್ಥರಾಗಿದ್ದು, ವಿಷಯವನ್ನು ಮಾತನಾಡಿ ಬಗೆಹರಿಸಿಕೊಳ್ಳೋಣ ಎಂಬ ಉದ್ದೇಶದಿಂದ ಫೆಬ್ರವರಿ 1ರಂದು ರಾತ್ರಿ ಸುಮಾರು 8.30ರ ಸುಮಾರಿಗೆ ದೇವಸಂದ್ರದಲ್ಲಿ ಭೇಟಿಯಾಗಲು ನಿರ್ಧರಿಸಿದ್ದರು. ರೋಷನ್ ನಿಗದಿತ ಸ್ಥಳಕ್ಕೆ ಬಂದ ತಕ್ಷಣವೇ, ಮಾಮುವಿನ ಜೊತೆಗಿದ್ದ ಸುಮಾರು ಹತ್ತು ರಿಂದ ಹದಿನೈದು ಮಂದಿ ಸ್ನೇಹಿತರು ಅಲ್ಲಿಗೆ ಬಂದು ಸೇ–ರಿಕೊಂಡಿದ್ದಾರೆ ಎನ್ನಲಾಗಿದೆ.

ಮೊದಲಿಗೆ ಮಾತಿನ ಚಕಮಕಿ ನಡೆದಿದ್ದು, ನಂತರ ಮಾತಿಗೆ ಮಾತು ಬೆಳೆದು ಗಲಾಟೆ ತೀವ್ರ ಸ್ವರೂಪ ಪಡೆದಿದೆ. ಆರೋಪಿಗಳ ಗುಂಪು ರೋಷನ್ ಮೇಲೆ ಕೈ ಹಾಕಿ ಹಲ್ಲೆ ನಡೆಸಿದೆ. ಇದರಿಂದ ಆಕ್ರೋಶಗೊಂಡ ರೋಷನ್ ಅಲ್ಲಿಂದ ತಪ್ಪಿಸಿಕೊಳ್ಳಲು ಆಕಡೆ ಈಕಡೆ ಓಡಾಡಿದವನೇ, ಒಂದು ಕಲ್ಲನ್ನು ಎತ್ತಿಕೊಂಡು ಮಾಮುವಿನ ಮೇಲೆ ಹಲ್ಲೆ ಮಾಡಲು ಮುಂದಾಗಿದ್ದಾನೆ. ಈ ಸಂದರ್ಭದಲ್ಲೇ ಯುವಕರ ಗುಂಪು ಚಾಕು ತೆಗೆದು ರೋಷನ್‌ನ ಕುತ್ತಿಗೆ ಭಾಗಕ್ಕೆ ಮನಬಂದಂತೆ ಇರಿದಿದೆ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ.

ರೋಷನ್ ಗಂಭೀರವಾಗಿ ಗಾಯಗೊಂಡು ರಕ್ತಸ್ರಾವವಾಗು ತ್ತಿದ್ದಂತೆಯೇ ಸ್ಥಳೀಯರು ತಕ್ಷಣ ಮಧ್ಯಪ್ರವೇಶಿಸಿ ಜಗಳವನ್ನು ಬಿಡಿಸಿದ್ದಾರೆ. ಕೂಡಲೇ ಗಾಯಾಳುವನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸದ್ಯ ಆತನಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಇತ್ತ, ದೇವಸಂದ್ರ ಪ್ರದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ಇಂತಹ ಗಲಾಟೆ ಹಾಗೂ ಅಸಾಮಾಜಿಕ ಘಟನೆಗಳು ಹೆಚ್ಚಾಗುತ್ತಿವೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ. ಬೇರೆ ಪ್ರದೇಶಗಳಿಂದ ಬರುವ ಯುವಕರು ಇಲ್ಲಿ ಬಂದು ಜಗಳ, ದಾಂಧಲೆ ನಡೆಸುತ್ತಿದ್ದಾರೆ ಎಂಬ ಆರೋಪ ಕೂಡ ಕೇಳಿಬಂದಿದೆ. ಸಾರ್ವಜನಿಕ ಸುರಕ್ಷತೆಯ ದೃಷ್ಟಿಯಿಂದ ಈ ಪ್ರದೇಶದಲ್ಲಿ ಹೆಚ್ಚಿನ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು ಹಾಗೂ ಪೊಲೀಸ್ ಗಸ್ತು ಹೆಚ್ಚಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಘಟನೆ ಕುರಿತು ಪೊಲೀಸರು ಗಾಯಗೊಂಡ ರೋಷನ್‌ನಿಂದ ಹೇಳಿಕೆ ಪಡೆದುಕೊಂಡಿದ್ದು, ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಿ ಆರೋಪಿಗಳ ಗುರುತು ಪತ್ತೆ ಹಚ್ಚುವ ಕಾರ್ಯದಲ್ಲಿ ತೊಡಗಿದ್ದಾರೆ. ಶೀಘ್ರದಲ್ಲೇ ಆರೋಪಿಗಳನ್ನು ಬಂಧಿಸಲಾಗುವುದು ಎಂದು ಪೊಲೀಸ್ ಅಧಿಕಾರಿಗಳು ಭರವಸೆ ನೀಡಿದ್ದಾರೆ.

## ಸಿನಿಮಾ ಸ್ಟೈಲ್‌ನಲ್ಲಿ ಡ್ರೈವರ್ ಮೇಲೆ ಮಾರಣಾಂತಿಕ ಹಲ್ಲೆ



**ಬೆಳಗಾವಿ:** ಚಲಿಸುತ್ತಿದ್ದ ಲಾರಿಯ ಮೇಲೆ ಏರಿ, ಸಿನಿಮಾ ದೃಶ್ಯವನ್ನೇ ನೆನಪಿಸುವ ರೀತಿಯಲ್ಲಿ ಚಾಲಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಆಘಾತಕಾರಿ ಘಟನೆ ಬೆಳಗಾವಿ ನಗರದ ಕ್ಲಬ್ ರಸ್ತೆ ವ್ಯಾಪ್ತಿಯ ಶಂಕರಾನಂದ ಪುತ್ಥಳಿ ಬಳಿ ನಡೆದಿದೆ. ಈ ಘಟನೆ ನಗರದಲ್ಲಿ ಭಾರೀ ಆತಂಕವನ್ನುಂಟುಮಾಡಿದೆ.

ರುಕ್ಮಿಣಿ ನಗರ ನಿವಾಸಿ ಅಯಾಜ್ ಸವಣೂರ (36) ಎಂಬ ಲಾರಿ ಚಾಲಕ ಈ ಹಲ್ಲೆಗೆ ಒಳಗಾದ ವ್ಯಕ್ತಿಯಾಗಿದ್ದು, ಆತನ ಮೇಲೆ ಸುಮಾರು ಎಂಟು ಮಂದಿ ದುಷ್ಕರ್ಮಿಗಳು ಮಾರಣಾಂತಿಕವಾಗಿ ಹಲ್ಲೆ ನಡೆಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಪ್ರಾಥ–ʼಮಿಕ ಮಾಹಿತಿಯಂತೆ, ಹಿಂಡಲಗಾ ಪ್ರದೇಶದ ಬಳಿ ಸಂಭವಿಸಿದ ಅಪಘಾತವೇ ಈ ಭೀಕರ ಘಟನೆಯನ್ನು ಉಂಟುಮಾಡಿದ ಮೂಲ ಕಾರಣ ಎನ್ನಲಾಗಿದೆ.

ಮೂಲಗಳ ಪ್ರಕಾರ, ಅಪಘಾತದ ಬಳಿಕ ಲಾರಿ ನಿಲ್ಲಿಸದೇ ಮುಂದುವರಿದು ಚಲಿಸಿದ ಅಯಾಜ್ ಸವಣೂರನನ್ನು ಆರೋಪಿಗಳು ಬೆನ್ನುಹತ್ತಿಕೊಂಡು ಬಂದಿದ್ದಾರೆ. ಕ್ಲಬ್ ರಸ್ತೆಯ ಶಂಕರಾನಂದ ಪುತ್ಥಳಿ ಬಳಿ ಲಾರಿಯನ್ನು ಅಡ್ಡಗಟ್ಟಿ, ಚಲಿಸುತ್ತಿದ್ದ ಲಾರಿಯ ಮೇಲೇರಿದ ಆರೋಪಿಗಳು ಚಾಲಕನ ಮೇಲೆ ಹಲ್ಲೆಗೆ ಮುಂದಾಗಿದ್ದಾರೆ ಎನ್ನಲಾಗಿದೆ. ಈ ದೃಶ್ಯಗಳು ಸಿನಿಮಾ ಸ್ಟೈಲ್‌ನಲ್ಲಿ ನಡೆದಂತೆ ಕಂಡುಬಂದಿದ್ದು, ಸ್ಥಳೀಯರಲ್ಲಿ ಭೀತಿ ಮೂಡಿಸಿದೆ.

ಆರೋಪಿಗಳು ಚಾಕುಗಳನ್ನು ಬಳಸಿ ಅಯಾಜ್‌ನ ತೊಡೆ, ಕಿವಿ, ಬೆನ್ನು ಹಾಗೂ ತಲೆ ಭಾಗಗಳಿಗೆ ಮನಬಂದಂತೆ ಇರಿದಿದ್ದಾರೆ ಎಂದು ತಿಳಿದುಬಂದಿದೆ. ಅಲ್ಲದೆ, ಲಾರಿಯ ಮೇಲೆ ಕಲ್ಲು ತೂರಾಟ ನಡೆಸಿ, ಗಾಜುಗಳನ್ನು ಒಡೆದು ವಾಹನವನ್ನು ಸಂಪೂರ್ಣವಾಗಿ ಹಾನಿಗೊಳಿಸಿದ್ದಾರೆ. ಹಲ್ಲೆಯ ವೇಳೆ ಆರೋಪಿಗಳು ಅಟ್ಟಹಾಸ ಮೆರೆದಿದ್ದು, ಸಾರ್ವಜನಿಕರು ಕೆಲ ಕಾಲ ಬೆಚ್ಚಿಬಿದ್ದ ಸ್ಥಿತಿಯಲ್ಲಿ ಇದ್ದರು ಎನ್ನಲಾಗಿದೆ.

ಗಂಭೀರವಾಗಿ ಗಾಯಗೊಂಡ ಅಯಾಜ್ ಸವಣೂರ ʼನನ್ನು ತಕ್ಷಣವೇ ಸಮೀಪದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸದ್ಯ ಐಸಿಯು ವಿಭಾಗದಲ್ಲಿ ತೀವ್ರ ಚಿಕಿತ್ಸೆ ನೀಡಲಾಗುತ್ತಿದೆ. ವೈದ್ಯಕೀಯ ಮೂಲಗಳ ಪ್ರಕಾರ, ಆತನ ಸ್ಥಿತಿ ಇನ್ನೂ ಗಂಭೀರವಾಗಿದ್ದು, ಮುಂದಿನ ಕೆಲ ಗಂಟೆಗಳು ಅತ್ಯಂತ ಮಹತ್ವದ್ದಾಗಿವೆ ಎಂದು ತಿಳಿಸಲಾಗಿದೆ.

ಘಟನೆ ಬಗ್ಗೆ ಮಾಹಿತಿ ತಿಳಿದ ತಕ್ಷಣವೇ ಬೆಳಗಾವಿ ಪೊಲೀಸ್ ತಂಡಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿವೆ. ಜೊತೆಗೆ, ವೈಜ್ಞಾನಿಕ ಸಾಕ್ಷ್ಯ ಸಂಗ್ರಹಕ್ಕಾಗಿ ಸೋಕೋ (ಖಔಅಔ) ತಂಡವನ್ನು ಕರೆಸಲಾಗಿದ್ದು, ಸ್ಥಳದಿಂದ ಅಗತ್ಯ ಪುರಾವೆಗಳನ್ನು ಸಂಗ್ರಹಿಸಲಾಗಿದೆ.

ಈ ಘಟನೆ ಬೆಳಗಾವಿಯ ಕ್ಯಾಂಪ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣ ದಾಖಲಿಸಿಕೊಂಡ ಪೊಲೀಸರು ಆರೋಪಿಗಳ ಗುರುತು ಪತ್ತೆ ಹಾಗೂ ಬಂಧನಕ್ಕಾಗಿ ಶೋಧ ಕಾರ್ಯವನ್ನು ತೀವ್ರಗೊಳಿಸಿದ್ದಾರೆ. ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದ್ದು, ಶೀಘ್ರದಲ್ಲೇ ಆರೋಪಿಗಳನ್ನು ಬಂಧಿಸಲಾಗುವುದು ಎಂದು ಪೊಲೀಸ್ ಅಧಿಕಾರಿಗಳು ಭರವಸೆ ನೀಡಿದ್ದಾರೆ.

ನಗರದ ಮಧ್ಯಭಾಗದಲ್ಲೇ ಇಂತಹ ಹಿಂಸಾತ್ಮಕ ಘಟನೆ ನಡೆದಿರುವುದರಿಂದ, ಸಾರ್ವಜನಿಕ ಸುರಕ್ಷತೆ ಬಗ್ಗೆ ಮತ್ತೆ ಚರ್ಚೆ ಆರಂಭವಾಗಿದ್ದು, ಪೊಲೀಸ್ ಗಸ್ತು ಹೆಚ್ಚಿಸುವ ಅಗತ್ಯವಿದೆ ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಶಿಕ್ಷಣ ಮತ್ತು ಸಮಾಜ ಸೇವೆಗಾಗಿ ಕರ್ನಾಟಕ ರಾಜ್ಯ ಸೇವಾ ರತ್ನ ಪ್ರಶಸ್ತಿ



**ಬೆಂಗಳೂರು:**ಮಲ್ಲೇಶ್ವರಂನಲ್ಲಿರುವ ಆಕ್ಸಿಸ್ ಬ್ಯಾಂಕ್ ಕೇಂದ್ರ ಕಚೇರಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿ, ವಿಶೇಷವಾಗಿ ಶಿಕ್ಷಣ ಮತ್ತು ಸಮಾಜ ಸೇವೆ ಕ್ಷೇತ್ರದಲ್ಲಿ ಸಮಾಜಮುಖಿ ಸೇವೆ ಸಲ್ಲಿಸಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಶಿಕ್ಷಣ ಮತ್ತು ಸಮಾಜಸೇವೆ, ಮೌಲ್ಯಾಧಾರಿತ ಚಿಂತನೆ ಹಾಗೂ ನಿರಂತರ ಸಾರ್ವಜನಿಕ ಸೇವೆಗಾಗಿ ಪ್ರಸಿದ್ಧರಾದ ಸಮಾಜಸೇವಕ ಆನಂದ್ ಸಿ. ತಿರುಮಲ ಅವರಿಗೆ ಆಕ್ಸಿಸ್ ಬ್ಯಾಂಕ್ ವತಿಯಿಂದ ಕರ್ನಾಟಕ ರಾಜ್ಯ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಆಕ್ಸಿಸ್ ಬ್ಯಾಂಕ್ ಶಾಖಾ ವ್ಯವಸ್ಥಾಪಕರಾದ ಗುರು ಪ್ರಸಾದ್,: ಶಿಕ್ಷಣ ಮತ್ತು ಸಮಾಜ ಸೇವೆಯ ಮೂಲಕ ಸಮಾಜದ ಹಿತಕ್ಕಾಗಿ ನಿಸ್ವಾರ್ಥವಾಗಿ ಸೇವೆ ಸಲ್ಲಿಸುತ್ತಿರುವ ಆನಂದ್ ಸಿ. ತಿರುಮಲ ಅವರ ಕಾರ್ಯ ಶ್ಲಾಘನೀಯ. ಅವರ ಸೇವೆಗೆ ಕರ್ನಾಟಕ ರಾಜ್ಯ ಸೇವಾ ರತ್ನ ಪ್ರಶಸ್ತಿ ನೀಡಿರುವುದು ನಮಗೆ ಹೆಮ್ಮೆಯ ವಿಷಯ ಎಂದು ಹೇಳಿದರು.

ವ್ಯವಸ್ಥಾಪಕರಾದ ದೀಕ್ಷಾ ಡಿ. ಮಾತನಾಡಿ, ಶಿಕ್ಷಣದ ಜೊತೆಗೆ ಸಮಾಜದ ಮೂಲ ಸಮಸ್ಯೆಗಳತ್ತ ಗಮನಹರಿಸಿ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿರುವ ಅಪರೂಪದ ವ್ಯಕ್ತಿತ್ವ ಆನಂದ್ ಸಿ. ತಿರುಮಲ. ಇಂತಹ ನಿಜವಾದ ಸಮಾಜಮುಖಿ ಸಾಧಕರನ್ನು ಕಾರ್ಪೊರೇಟ್ ಸಂಸ್ಥೆಗಳು ಗುರುತಿಸಿ ಗೌರವಿಸುವುದು ಅತ್ಯಂತ ಶ್ಲಾಘನೀಯ ಎಂದರು.

ಸೇವಾ ರತ್ನ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಆನಂದ್ ಸಿ. ತಿರುಮಲ,:"ಶಿಕ್ಷಣ ಮತ್ತು ಸಮಾಜ ಸೇವೆಯ ಪಥದಲ್ಲಿ ದೊರಕುವ ಇಂತಹ ಗೌರವಗಳು ಇನ್ನಷ್ಟು ಹೊಣೆಗಾ–ರಿಕೆಯಿಂದ ಕೆಲಸ ಮಾಡಲು ಶಕ್ತಿ ನೀಡುತ್ತವೆ. ಈ ಗೌರವವನ್ನು ಸಮಾಜದ ಹಿತಕ್ಕಾಗಿ ದುಡಿಯುವ ಎಲ್ಲ ಕೈಗಳಿಗೆ ಸಮರ್ಪಿಸುತ್ತೇನೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಕ್ಸಿಸ್ ಬ್ಯಾಂಕ್‌ನ ಶಾಖಾ ವ್ಯವಸ್ಥಾಪಕ ಗುರು ಪ್ರಸಾದ್, ಪಾರ್ಥಿಬನ್ ಆರ್., ಸತೀಶ್ ಬಾಬು (ಪತ್ರಕರ್ತರು), ಹರಿಣಿ ಕೆ., ದೀಕ್ಷಾರ ಡಿ., ಮಂಜುನಾಥ್ ಸೇ–ರಿದಂತೆ ವಿವಿಧ ವಿಭಾಗಗಳ ಅಧಿಕಾ–ರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಘನತೆ ತುಂಬಿದರು.

ಬ್ಯಾಂಕಿಂಗ್ ಕ್ಷೇತ್ರದೊಂದಿಗೆ ಶಿಕ್ಷಣ ಮತ್ತು ಸಮಾಜಸೇವೆ ಕೈಜೋಡಿಸಿದಾಗ ಮಾತ್ರ ಸಮಗ್ರ ಅಭಿವೃದ್ಧಿ ಸಾಧ್ಯ. ಆನಂದ್ ಸಿ. ತಿರುಮಲ ಅವರ ಸಾಧನೆ ನಮಗೆಲ್ಲ ಹೆಮ್ಮೆ ತಂದಿದೆ.
**ಹರಿಣಿ ಕೆ. ಏಜೆನ್ಸಿ ಮ್ಯಾನೇಜರ್, ಆಕ್ಸಿಸ್ ಬ್ಯಾಂಕ್ ಮ್ಯಾಕ್ಸ್ ಲೈಫ್ ಇನ್ಶೂರೆನ್ಸ್, ಬೆಂಗಳೂರು.**

## 20ನೇ ವರ್ಷದ ಶ್ರೀ ಕ್ಷೇತ್ರ ಧರ್ಮಸ್ಥಳ ಪಾದಯಾತ್ರೆ: ಭಕ್ತಾದಿಗಳಿಗೆ ಆಹ್ವಾನ



**ಕೃಷ್ಣರಾಜಪೇಟೆ:**ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಕ್ಷಣಾ ವೇದಿಕೆ ಮಂಡ್ಯ ಜಿಲ್ಲಾಧ್ಯಕ್ಷ ಡಿ. ಎಸ್. ವೇಣು ರವರು ಪೂಜಾರಿ ಯಲಕ್ಕಪ್ಪನವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಪಾದಯಾತ್ರೆಯು ದಿನಾಂಕ 10-02-2026ರ ಮಂಗಳವಾರ ತಾಲೂಕಿನ ಹರಿರಾಯನಹಳ್ಳಿ ಗ್ರಾಮದಿಂದ ಆರಂಭವಾಗಲಿದೆ, ಸುಮಾರು 20 ವರ್ಷಗಳಿಂದ ಈ ಧಾರ್ಮಿಕ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದೆ. ಪಾದಯಾತ್ರೆಯಲ್ಲಿ ಪಾಲ್ಗೊಳ್ಳುವ ಮಹಿಳೆಯರಿಗೆ, ಪುರುಷರಿಗೆ ಉಚಿತವಾಗಿ ಊಟ, ಶುದ್ಧ ಕುಡಿಯುವ ನೀರು ಮತ್ತು ಸುರಕ್ಷಿತ ವಸತಿ ವ್ಯವಸ್ಥೆಯನ್ನು ಸಮಿತಿಯ ವತಿಯಿಂದ ಮಾಡಲಾಗಿದೆ. ತಾಲೂಕಿನಲ್ಲಿ ಉತ್ತಮ ಮಳೆ-ಬೆಳೆಯಾಗಲಿ, ರೈತರು ಸುಖ-ಸಮೃದ್ಧಿಯಿಂದ ಇರಲಿ ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮಂಜುನಾಥ ಸ್ವಾಮಿ ಅನುಗ್ರಹಿಸಲಿ ಎಂಬ ಉದ್ದೇಶದಿಂದ ಈ ಪಾದಯಾತ್ರೆ ನಡೆಸಲಾಗುತ್ತಿದೆ. ಪಾದಯಾತ್ರೆಯ ಹಾದಿಯುದ್ದಕ್ಕೂ ಭಕ್ತಾದಿಗಳ ಸುರಕ್ಷತೆಯ ಬಗ್ಗೆ ವಿಶೇಷ ಗಮನ ಹರಿಸಲಾಗುವುದು. ವಿಶೇಷವಾಗಿ ರಸ್ತೆ ಸಂಚಾರದ ವೇಳೆ ಎಚ್ಚರಿಕೆ ವಹಿಸಲು ಸೂಚಿಸಲಾಗಿದೆ. ತಾಲೂಕಿನ ಆಸಕ್ತ ಭಕ್ತಾದಿಗಳು ಈ ಪಾದಯಾತ್ರೆಯಲ್ಲಿ ಪಾಲ್ಗೊಳ್ಳಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಮತ್ತು ನೋಂದಣಿಗಾಗಿ ಹರಿರಾಯನಹಳ್ಳಿಯ ಪೂಜಾರಿ ಯಲಕ್ಕಪ್ಪನವರನ್ನು ಸಂಪರ್ಕಿಸಿ ಎಂದು ತಿಳಿಸಿದರು,

ನಂತರ ಮಾತನಾಡಿದ ಪೂಜಾರಿ ಯಲ್ಲಕಪ್ಪ ರವರು ಪ್ರತಿ ವರ್ಷದಂತೆ ಈ ವರ್ಷವೂ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಪಾದಯಾತ್ರೆ ಕೈಗೊಳ್ಳುವ ಭಕ್ತಾದಿಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ, ಕಳೆದ 20 ವರ್ಷಗಳಿಂದ ಸತತವಾಗಿ ಈ ಸೇವೆಯನ್ನು ಮಾಡಿಕೊಂಡು ಬರುತ್ತಿದ್ದೇವೆ, ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ, ಈ ಪಾದಯಾತ್ರೆಯು ವರ್ಷದಿಂದ ವರ್ಷಕ್ಕೆ ಜನಪ್ರಿಯವಾಗುತ್ತಿದ್ದು, ತಾಲೂಕಿನಿಂದ ಸುಮಾರು 10,000ಕ್ಕೂ ಹೆಚ್ಚು ಜನರನ್ನು ಒಟ್ಟುಗೂಡಿಸುವ ಗುರಿ ಹೊಂದಲಾಗಿದೆ. ಸದ್ಯಕ್ಕೆ ಸುಮಾರು 400 ರಿಂದ 500 ಭಕ್ತರು ಪಾದಯಾತ್ರೆಯಲ್ಲಿ ನೇರವಾಗಿ ಪಾಲ್ಗೊಳ್ಳುತ್ತಿದ್ದಾರೆ, ಪಾದಯಾತ್ರೆಯಲ್ಲಿ ಭಾಗವಹಿಸುವ ಭಕ್ತರಿಗೆ ದಾರಿಯುದ್ದಕ್ಕೂ ಬೆಳಗಿನ ಉಪಹಾರ, ಮಧ್ಯಾಹ್ನದ ಊಟ, ರಾತ್ರಿಯ ವಸತಿ ಹಾಗೂ ವಿಶ್ರಾಂತಿಯ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು. ಭಕ್ತರು ಯಾವುದೇ ತೊಂದರೆಯಿಲ್ಲದೆ ಕ್ಷೇಮವಾಗಿ ಧರ್ಮಸ್ಥಳ ತಲುಪಲು ಪೂರಕ ವ್ಯವಸ್ಥೆ ಮಾಡಲಾಗಿದೆ. ಆಸಕ್ತರು ಪಾದಯಾತ್ರೆಯಲ್ಲಿ ಭಾಗವಹಿಸಲು ಮೊಬೈಲ್ ಸಂಖ್ಯೆ 8694946613 ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು ಶ್ರೀ ಕ್ಷೇತ್ರ ಧರ್ಮಸ್ಥಳದ ಶ್ರೀ ಕ್ಷೇತ್ರ ಧರ್ಮಸ್ಥಳದ ಮೇಲಿರುವ ಅಪಾರ ಭಕ್ತಿಯಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಮತ್ತು ಭಕ್ತರು ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು,

## ಪ್ರೀತಿ ಹೆಸರಲ್ಲಿ ವಿವಾಹಿತ ಮಹಿಳೆ ಜೊತೆ ಚಕ್ಕಂದ



**ದೇವನಹಳ್ಳಿ:** ಗಂಡನಿಂದ ದೂರ ವಾಗಿದ್ದ ಮಹಿಳೆಯೊಬ್ಬರನ್ನು ಪ್ರೀತಿ ಹೆಸರಲ್ಲಿ ಮದುವೆ ಯಾಗುವುದಾಗಿ ನಂಬಿಸಿ, ಆಕೆಯೊಂದಿಗೆ ಲೈಂಗಿಕ ಸಂಪರ್ಕ ನಡೆಸಿದ್ದಲ್ಲದೆ, ನಂತರ ಆಕೆ ಗರ್ಭಿಣಿಯಾಗಿರುವುದು ತಿಳಿದ ತಕ್ಷಣವೇ ಆಕೆಗೆ ಊಟದಲ್ಲಿ ಗರ್ಭಪಾತದ ಮಾತ್ರೆ ನೀಡಿದ ಆರೋಪ ದೇವನಹಳ್ಳಿ ತಾಲೂಕಿನಲ್ಲಿ ಕೇಳಿಬಂದಿದೆ. ಈ ಗಂಭೀರ ಪ್ರಕರಣಕ್ಕೆ ಸಂಬಂಧಿಸಿದಂತೆ ದೊಡ್ಡಬಳ್ಳಾಪುರ ನಗರದ ಶಾಂತಿನಗರ ನಿವಾಸಿ ಪ್ರವೀಣ್ ಕುಮಾರ್ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ಸಂತ್ರಸ್ತ ಮಹಿಳೆಗೆ ಈಗಾಗಲೇ ಒಬ್ಬ ಮಗಳಿರುವುದೂ ಬಹಿರಂಗವಾಗಿದ್ದು, ಪ್ರಿಯಕರ ಮಾತ್ರವಲ್ಲದೆ ಆತನ ಕುಟುಂಬದವರಿಂದಲೂ ತಾನು ಮಾನಸಿಕ ಹಾಗೂ ದೈಹಿಕ ಶೋಷಣೆಗೆ ಒಳಗಾಗಿದ್ದೇನೆ ಎಂದು ಆಕೆ ಗಂಭೀರ ಆರೋಪ ಮಾಡಿದ್ದಾಳೆ. ಪ್ರಕರಣವು ಮಹಿಳೆಯರ ಸುರಕ್ಷತೆ ಹಾಗೂ ನಂಬಿಕೆಯ ದುರ್ಬಳಕೆಯ ಬಗ್ಗೆ ಮತ್ತೆ ಗಂಭೀರ ಚರ್ಚೆಗೆ ಕಾರಣವಾಗಿದೆ.

**ಘಟನೆ ಹಿನ್ನೆಲೆ:**ಸಂತ್ರಸ್ತ ಮಹಿಳೆ ಗಂಡನಿಂದ ದೂರವಾಗಿ ಬದುಕುತ್ತಿದ್ದಳು. ಸುಮಾರು ಎರಡು ವರ್ಷಗಳ ಹಿಂದೆ ಕೆಲಸದ ನಿಮಿತ್ತ ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಬೆಟ್ಟದ ಸಮೀಪದಲ್ಲಿರುವ ಕೆಫೆಯೊಂದರಲ್ಲಿ ಮ್ಯಾನೇಜರ್ ಆಗಿ ಕೆಲಸಕ್ಕೆ ಸೇರಿದ್ದಳು. ಈ ಸಂದರ್ಭದಲ್ಲಿ ಅಲ್ಲಿಗೆ ಬರುತ್ತಿದ್ದ ಪ್ರವೀಣ್ ಕುಮಾರ್ ಪರಿಚಯವಾಗಿದ್ದು, ಆ ಪರಿಚಯ ಮುಂದುವರಿದು ಸ್ನೇಹಕ್ಕೆ ತಿರುಗಿದೆ.

ಸ್ನೇಹ ಗಟ್ಟಿಯಾಗುತ್ತಿದ್ದಂತೆ, ತಾನು ಈಗಾಗಲೇ ಮದುವೆಯಾಗಿ ಗಂಡನಿಂದ ದೂರವಾಗಿದ್ದು, ಒಬ್ಬ ಮಗಳೂ ಇದ್ದಾಳೆ ಎಂಬ ವಿಚಾರವನ್ನು ಮಹಿಳೆ ಪ್ರಾಮಾಣಿಕವಾಗಿ ಪ್ರವೀಣ್‌ಗೆ ತಿಳಿಸಿದ್ದಳು. ಆದರೆ ಈ ಎಲ್ಲಾ ವಿಷಯಗಳು ಗೊತ್ತಿದ್ದರೂ, "ನೀನೇ ನನಗೆ ಇಷ್ಟ, ನಿನ್ನನ್ನು ಮದುವೆಯಾಗುತ್ತೇನೆ" ಎಂದು ನಂಬಿಸಿದ್ದ ಆರೋಪಿ, ಆಕೆಯೊಂದಿಗೆ ಲೈಂಗಿಕ ಸಂಪರ್ಕ ಹೊಂದಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾಳೆ.

ಇನ್ನೂ ಗಂಭೀರವಾಗಿ, ಸಂತ್ರಸ್ತ ಮಹಿಳೆ ಸುಮಾರು ಒಂದು ವರ್ಷದ ಕಾಲ ಪ್ರವೀಣ್ ಕುಮಾರ್ ಮನೆದಲ್ಲೇ ನೆಲೆಸಿದ್ದಳು ಎಂಬ ಮಾಹಿತಿಯೂ ಹೊರಬಂದಿದೆ. ಈ ಅವಧಿಯಲ್ಲಿ ತನ್ನ ಮೇಲೆ ಯಾವುದೇ ರೀತಿಯ ಸಂಶಯ ಇಲ್ಲದೆ ಜೀವನ ನಡೆಸಿದ್ದಳು ಎಂದು ಆಕೆ ಹೇಳಿದ್ದಾಳೆ.

**ಗರ್ಭಿಣಿ ಎಂಬ ವಿಚಾರ ತಿಳಿದ ಬಳಿಕ ತಿರುವು:**ಈ ನಡುವೆ ತಾನು ನಾಲ್ಕು ತಿಂಗಳ ಗರ್ಭಿಣಿಯಾಗಿರುವ ವಿಚಾರವನ್ನು ಮಹಿಳೆ ಪ್ರವೀಣ್‌ಗೆ ತಿಳಿಸಿದ್ದಳು. ಆದರೆ ಆ ಕ್ಷಣದಿಂದಲೇ ಆತನ ನಿಜವಾದ ಮುಖ ಹೊರಬಂದಿತು ಎಂದು ಸಂತ್ರಸ್ತೆ ದೂರಿದ್ದಾಳೆ. ಮದುವೆಯಾಗುವಂತೆ ಕೇಳಿದಾಗ, "ನೀನು ಗಂಡನನ್ನು ಬಿಟ್ಟವಳು, ನೀನು ಬೇರೆ ಜಾತಿಯವಳು" ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ, ಹಲ್ಲೆ ನಡೆಸಿದ್ದಾನೆ ಎಂದು ಆರೋಪಿಸಿದ್ದಾಳೆ.

ಇದರೊಂದಿಗೆ ಆರೋಪಿ ಮನೆಯವರೂ ಕೂಡ ಜಾತಿ ನಿಂದನೆ ಮಾಡಿ, ಮಾನಸಿಕ ಕಿರುಕುಳ ನೀಡಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾಳೆ. ಕೊನೆಗೆ ಎಲ್ಲರೂ ಸೇರಿ ತನ್ನನ್ನು ಹೊರಹಾಕಿದ್ದಾರೆ ಎನ್ನಲಾಗಿದೆ.

**ಪೊಲೀಸ್ ಠಾಣೆ ಮೆಟ್ಟಿಲೇರಿದ ಸಂತ್ರಸ್ತೆ:**ಈ ಘಟನೆಗಳಿಂದ ನೊಂದ ಸಂತ್ರಸ್ತ ಮಹಿಳೆ ದೊಡ್ಡಬಳ್ಳಾಪುರ ಮಹಿಳಾ ಪೊಲೀಸ್ ಠಾಣೆಗೆ ತೆರಳಿ ದೂರು ಅರ್ಜಿ ಸಲ್ಲಿಸಿದ್ದಾಳೆ. ಪ್ರವೀಣ್ ಕುಮಾರ್ ಹಾಗೂ ಆತನ ಕುಟುಂಬದವರನ್ನು ಕರೆಸಿ ಬುದ್ಧಿ ಹೇಳುವಂತೆ ಮನವಿ ಮಾಡಿಕೊಂಡಿದ್ದಾಳೆ. ಅದರಂತೆ ಪೊಲೀಸರು ಆರೋಪಿಗಳನ್ನು ಠಾಣೆಗೆ ಕರೆಸಿ ಎಚ್ಚರಿಕೆ ನೀಡಿದ ಬಳಿಕ, ಕೆಲ ದಿನಗಳ ಕಾಲ ಪ್ರವೀಣ್ ಮಹಿಳೆಯನ್ನು ಸರಿಯಾಗಿ ನೋಡಿಕೊಂಡಿದ್ದಾನೆ ಎಂದು ಆಕೆ ಹೇಳಿದ್ದಾಳೆ.

**ಲಾಡ್ಜ್‌ನಲ್ಲಿ ನಡೆದ ಭೀಕರ ಘಟನೆ:**ಈ ನಡುವೆ ಜನವರಿ 25ರಂದು, ಇಬ್ಬರೂ ಲಾಡ್ಜ್ ಒಂದರಲ್ಲಿ ಕೊಠಡಿ ಪಡೆದು ತಂಗಿದ್ದ ವೇಳೆ ಈ ಭೀಕರ ಘಟನೆ ನಡೆದಿದೆ. ಆರೋಪಿ ತಂದುಕೊಟ್ಟ ಎಗ್ ರೈಸ್ ಸೇವಿಸಿದ ಕೆಲವೇ ಹೊತ್ತಿನಲ್ಲಿ ಮಹಿಳೆಗೆ ತೀವ್ರ ಅಸ್ವಸ್ಥತೆ ಉಂಟಾಗಿ ಗರ್ಭಪಾತವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ತನ್ನಿಗೆ ನೀಡಿದ್ದ ಊಟದಲ್ಲಿ ಪ್ರವೀಣ್ ಕುಮಾರ್ ಗರ್ಭಪಾತದ ಮಾತ್ರೆ ಸೇರಿಸಿ ಕೊಟ್ಟಿದ್ದಾನೆ ಎಂದು ಮಹಿಳೆ ಗಂಭೀರ ಆರೋಪ ಮಾಡಿದ್ದಾಳೆ. ಈ ಘಟನೆ ಆಕೆಯ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ತೀವ್ರ ಆಘಾತ ತಂದಿದೆ ಎಂದು ಹೇಳಲಾಗಿದೆ.

**ಬಂಧನ ಮತ್ತು ತನಿಖೆ:**ಸಂತ್ರಸ್ತೆಯ ದೂರಿನ ಮೇರೆಗೆ ದೇವನಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಆರೋಪಿ ಪ್ರವೀಣ್ ಕುಮಾರ್‌ನನ್ನು ಬಂಧಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿದಿದ್ದು, ವೈದ್ಯಕೀಯ ವರದಿ, ಲಾಡ್ಜ್ ದಾಖಲೆಗಳು ಹಾಗೂ ಇತರೆ ಪುರಾವೆಗಳ ಆಧಾರದಲ್ಲಿ ವಿಚಾರಣೆ ನಡೆಯುತ್ತಿದೆ.

ಈ ಘಟನೆ ಪ್ರೀತಿ ಹೆಸರಲ್ಲಿ ನಡೆಯುವ ನಂಬಿಕೆಯ ದ್ರೋಹ ಹಾಗೂ ಮಹಿಳೆಯರ ಮೇಲಿನ ಶೋಷಣೆಯ ಮತ್ತೊಂದು ಭೀಕರ ಮುಖವನ್ನು ಬಹಿರಂಗಪಡಿಸಿದ್ದು, ಆರೋಪಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಸಾರ್ವಜನಿಕ ವಲಯದಿಂದ ಆಗ್ರಹ ವ್ಯಕ್ತವಾಗುತ್ತಿದೆ.

## ಜಾತಕ ತೋರಿಸಲು ಹೋದ ಯುವತಿ ಮೇಲೆ ಅರ್ಚಕನಿಂದ ಅತ್ಯಾಚಾರ?

**ಚಿಕ್ಕಮಗಳೂರು:** ಮದುವೆಗೆ ಸಿದ್ಧವಾಗಿದ್ದ ಯುವತಿಯೊಬ್ಬಳು ತನ್ನ ಜಾತಕ ಪರಿಶೀಲನೆಗಾಗಿ ದೇವಸ್ಥಾನಕ್ಕೆ ತೆರಳಿದ್ದ ಸಂದರ್ಭದಲ್ಲಿ, ಅದನ್ನೇ ನೆಪವಾಗಿಸಿಕೊಂಡು ದೇವಸ್ಥಾನದ ಅರ್ಚಕನೇ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂಬ ಭಾರೀ ಆರೋಪ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಹೊರಟ್ಟಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ. ಈ ಘಟನೆ ಆಕ್ರೋಶ ಮತ್ತು ಆತಂಕಕ್ಕೆ ಕಾರಣವಾಗಿದೆ.

ಹೊರಟ್ಟಿ ಗ್ರಾಮದ ಪುರಾತನ ಹಾಗೂ ಭಕ್ತರ ನಂಬಿಕೆಯ ಕೇಂದ್ರವಾಗಿರುವ ಈಶ್ವರ ಪಾರ್ವತಿ ದೇವಸ್ಥಾನದ ಅರ್ಚಕ ಕೃಷ್ಣರಾವ್ ವಿರುದ್ಧ ಈ ಗಂಭೀರ ಆರೋಪ ಕೇಳಿಬಂದಿದೆ. ನೊಂದ ಯುವತಿ ಈ ಸಂಬಂಧ ಬಣಕಲ್ ಪೊಜಲೀಸ್ ಠಾಣೆಗೆ ದೂರು ನೀಡಿದ್ದು, ದೂರಿನ ಆಧಾರದ ಮೇಲೆ ಬಣಕಲ್ ಪೊಲೀಸರು ತಕ್ಷಣ ಕಾರ್ಯಪ್ರವೃತ್ತರಾಗಿ ಆರೋಪಿಯನ್ನು ಬಂಧಿಸಿದ್ದಾರೆ.

ಪೊಲೀಸ್ ಮೂಲಗಳ ಪ್ರಕಾರ, ಮದುವೆಯಾಗಲು ಸಿದ್ಧವಾಗಿದ್ದ ಯುವತಿ ತನ್ನ ಭವಿಷ್ಯ ಮತ್ತು ವಿವಾಹ ಸಂಬಂಧಿತ ವಿಚಾರಗಳಿಗಾಗಿ ಜಾತಕ ತೋರಿಸುವ ಉದ್ದೇಶದಿಂದ ದೇವಸ್ಥಾನಕ್ಕೆ ಹೋಗುತ್ತಿದ್ದಳು. ಈ ಸಂದರ್ಭ ಅರ್ಚಕ ಕೃಷ್ಣರಾವ್ ಯುವತಿಯ ಜಾತಕದಲ್ಲಿ ದೋಷವಿದೆ, ಅದನ್ನು ನಿವಾರಣೆ ಮಾಡಲೇಬೇಕು, ಇಲ್ಲವಾದರೆ ಮದುವೆ ಜೀವನದಲ್ಲಿ ಅನರ್ಥಗಳು ಸಂಭವಿಸುತ್ತವೆ ಎಂದು ಭಯ ಹುಟ್ಟಿಸಿದ್ದಾನೆ ಎಂದು ಆರೋಪಿಸಲಾಗಿದೆ.


ಯುವತಿಯ ದೂರಿನಂತೆ, 2025ರ ನವೆಂಬರ್ 23ರಿಂದ 2026ರ ಫೆಬ್ರವರಿ 2ರ ಅವಧಿಯಲ್ಲಿ, ಜಾತಕದ ದೋಷ ನಿವಾರಣೆ ಮಾಡುವ ಹೆಸರಿನಲ್ಲಿ ಅರ್ಚಕ ಹಲವು ಬಾರಿ ಆಕೆಯನ್ನು ಏಕಾಂಗಿ ಸ್ಥಳಗಳಿಗೆ ಕರೆದುಕೊಂಡು ಹೋಗಿ ಅತ್ಯಾಚಾರ ನಡೆಸಿದ್ದಾನೆ. ಧಾರ್ಮಿಕ ನಂಬಿಕೆಯನ್ನು ದುರುಪಯೋಗಪಡಿಸಿಕೊಂಡು, ಪೂಜೆ ಪುನಸ್ಕಾರ ಮತ್ತು ಪರಿಹಾರ ವಿಧಿಗಳ ನೆಪದಲ್ಲಿ ಯುವತಿಯನ್ನು ಹೆದರಿಸಿ ಮೌನವಾಗಿರಿಸುವ ಪ್ರಯತ್ನ ಮಾಡಿದ್ದಾನೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

## ಸಿರಾ ತಾಲೂಕು ಕಚೇರಿಯಲ್ಲಿ ದಾಖಲೆಗಳಿಗಾಗಿ ರೈತರ ಪರದಾಟ; 'ಇಂಟರ್ನೆಟ್ ಸಮಸ್ಯೆ' ನೆಪ

**ಸಿರಾ:** ತುಮಕೂರು ಜಿಲ್ಲೆಯ ಸಿರಾ ತಾಲೂಕು ಕಚೇರಿಯ ರೆಕಾರ್ಡ್ ರೂಂನಲ್ಲಿ ಅಗತ್ಯ ದಾಖಲೆಗಳಿಗಾಗಿ ರೈತರು ದಿನಗಳಿಂದ ಪರದಾಡುತ್ತಿದ್ದಾರೆ. ಜಮೀನು ದಾಖಲೆ ಹಾಗೂ ಪರಿವರ್ತನೆ ಪತ್ರಗಳಿಗಾಗಿ ಕಚೇರಿಗೆ ಅಲೆದಾಡುತ್ತಿದ್ದರೂ, ಕಳೆದ ಮೂರುನಾಲ್ಕು ದಿನಗಳಿಂದ "ಇಂಟರ್ನೆಟ್ ಸಮಸ್ಯೆ" ಎಂಬ ಕಾರಣ ನೀಡಿ ದಾಖಲೆ ನೀಡಲಾಗುತ್ತಿಲ್ಲ ಎಂದು ರೈತರು ಆರೋಪಿಸಿದ್ದಾರೆ. ಪ್ರತಿದಿನವೂ 'ನಾಳೆ ಬನ್ನಿ' ಎಂದು ವಾಪಸ್ ಕಳುಹಿಸಲಾಗುತ್ತಿದ್ದು, ಚಪ್ಪಲಿ ಹರಿಯುವಷ್ಟು ದಿನ ಕಚೇರಿಗೆ ಬಂದರೂ ದಾಖಲೆ ಸಿಗುತ್ತಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸಬೇಕೆಂದು ರೈತರು ಆಗ್ರಹಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಮಠದ ಆಸ್ತಿ ಅಡವಿಟ್ಟು ಹಣ ಸಂಗ್ರಹ ಆರೋಪ: ಶ್ರೀ ಗುರುಸಿದ್ಧ ರಾಜಯೋಗೇಂದ್ರ ಸ್ವಾಮೀಜಿ ವಿರುದ್ಧ ಎಫ್‌ಐಆರ್



**ಹುಬ್ಬಳ್ಳಿ:** ಉತ್ತರ ಕರ್ನಾಟಕದ ಅತ್ಯಂತ ಪ್ರಭಾವಿ ಹಾಗೂ ಐತಿಹಾಸಿಕ ಮಠಗಳ ಪೀಠಾಧಿಪತಿಗಳಲ್ಲಿ ಒಬ್ಬರಾಗಿರುವ ಶ್ರೀ ಗುರುಸಿದ್ಧ ರಾಜಯೋಗೇಂದ್ರ ಸ್ವಾಮೀಜಿ ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. ಹಣಕಾಸು ವ್ಯವಹಾರಗಳಿಗಾಗಿ ಮಠದ ಆಸ್ತಿಯನ್ನು ಅಡವಿಟ್ಟಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಅವರ ವಿರುದ್ಧ ಹಾನಗಲ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

**ಪ್ರಕರಣದ ಹಿನ್ನೆಲೆ:** ಹುಬ್ಬಳ್ಳಿಯ ಮೂರುಸಾವಿರ ಮಠ ಹಾಗೂ ಹಾನಗಲ್‌ನ ಕುಮಾರೇಶ್ವರ ಮಠದ ಉಸ್ತುವಾರಿ ಹೊಂದಿರುವ ಶ್ರೀ ಗುರುಸಿದ್ಧ ರಾಜಯೋಗೇಂದ್ರ ಸ್ವಾಮೀಜಿ, ಮಠದ ಜಾಗ ಹಾಗೂ ಜಮೀನುಗಳನ್ನು ಮಾರಾಟ ಅಥವಾ ಹಸ್ತಾಂತರಿಸುವ ಭರವಸೆ ನೀಡಿ ಹಲವರಿಂದ ದೊಡ್ಡ ಮೊತ್ತದ ಹಣವನ್ನು ಮುಂಗಡವಾಗಿ ಪಡೆದಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಮೂಲಗಳ ಪ್ರಕಾರ, ಮಠದ ಆಸ್ತಿ ವ್ಯವಹಾರಕ್ಕೆ ಸಂಬಂಧಿಸಿ ಸುಮಾರು 1 ಕೋಟಿ 60 ಲಕ್ಷ ಮೊತ್ತದ ಹಣದ ಲೆನ್ದೆನ ನಡೆದಿದೆ ಎನ್ನಲಾಗಿದೆ. ಈ ಪೈಕಿ ಕೆಲವರಿಗೆ 4 ಲಕ್ಷ ಹಾಗೂ 12 ಲಕ್ಷ ಮುಂಗಡವಾಗಿ ಪಡೆದು, ಬಳಿಕ ಆಸ್ತಿಯನ್ನು ನೀಡದೇ ವಂಚನೆ ಮಾಡಲಾಗಿದೆ ಎಂಬ ಆರೋಪ ದೂರಿನಲ್ಲಿ ಉಲ್ಲೇಖವಾಗಿದೆ.

**ಕೋರ್ಟ್ ಆದೇಶ, ಎಫ್‌ಐಆರ್ ದಾಖಲು:** ಈ ಪ್ರಕರಣಕ್ಕೆ ಸಂಬಂಧಿ ಸಿದಂತೆ ಮಠದ ಭಕ್ತರು ಹಾಗೂ ಹಣ ಕಳೆದುಕೊಂಡವರು ನ್ಯಾಯಾಲಯದ ಮೆಟ್ಟಿಲೇರಿದ್ದರು. ಅರ್ಜಿಯನ್ನು ಪರಿಶೀಲಿಸಿದ ನ್ಯಾಯಾಲಯ, ಶ್ರೀಗಳ ವಿರುದ್ಧ ಪ್ರಕರಣ ದಾಖಲಿಸುವಂತೆ ಹಾನಗಲ್ ಪೊಲೀಸ್ ಠಾಣೆಗೆ ನಿರ್ದೇಶನ ನೀಡಿತ್ತು. ಅದರಂತೆ, ಹಾನಗಲ್ ಪೊಲೀಸರು ಕೇಸ್ ನಂಬರ್ 23/2026 ಅಡಿಯಲ್ಲಿ ಶ್ರೀ ಗುರುಸಿದ್ಧ ರಾಜಯೋಗೇಂದ್ರ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಧರ್ಮ ಮತ್ತು ಸಂಪ್ರದಾಯದ ರಕ್ಷಕರಾಗಬೇಕಾದ ಮಠಾಧೀಶರೇ ಮಠದ ಆಸ್ತಿಗೆ ಸಂಬಂಧಿಸಿದಂತೆ ಮೋಸ ಮಾಡಿದ್ದಾರೆ ಎಂಬ ಆರೋಪ ಭಕ್ತರಲ್ಲಿ ಆಘಾತ ಮೂಡಿಸಿದೆ.

**ತನಿಖೆ ಆರಂಭ:** ಪ್ರಸ್ತುತ ಪೊಲೀಸರು ಪ್ರಕರಣದ ತನಿಖೆ ಆರಂಭಿಸಿದ್ದು, ಸಂಗ್ರಹಿಸಿದ ಹಣವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ, ಈ ವ್ಯವಹಾರದಲ್ಲಿ ಇನ್ನಾರಾದರೂ ಪ್ರಭಾವಿ ವ್ಯಕ್ತಿಗಳ ಪಾತ್ರವಿದೆಯೇ ಎಂಬ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ. ಈ ಪ್ರಕರಣದ ಕುರಿತು ಮಠದ ಆಡಳಿತ ಮಂಡಳಿ ಯಾವ ರೀತಿಯ ಪ್ರತಿಕ್ರಿಯೆ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ.

## ಮಹಿಳೆ ವಿವಸ್ತ್ರಗೊಳಿಸಿ ಹಲ್ಲೆ ಪ್ರಕರಣ: 12 ಆರೋಪಿಗಳಿಗೆ ಐದು ವರ್ಷ ಕಠಿಣ ಶಿಕ್ಷೆ



**ಬೆಳಗಾವಿ:** ಜಿಲ್ಲೆಯ ವಂಟಮೂರಿ ಗ್ರಾಮದ ಮಹಿಳೆಯ ಮೇಲೆ ನಡೆದ ಅಮಾನವೀಯ ಹಲ್ಲೆ ಹಾಗೂ ಸಾರ್ವಜನಿಕವಾಗಿ ವಿವಸ್ತ್ರಗೊಳಿಸಿದ ಭೀಕರ ಪ್ರಕರಣಕ್ಕೆ ಇಂದು ನ್ಯಾಯಾಲಯ ಐತಿಹಾಸಿಕ ತೀರ್ಪು ನೀಡಿದೆ. ಪ್ರಕರಣದ ಪ್ರಮುಖ 12 ಮಂದಿ ಆರೋಪಿಗಳು ದೋಷಿಗಳು ಎಂದು ಸಾಬೀತಾಗಿದ್ದು, ಅವರಿಗೆ ತಲಾ ಐದು ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ದಂಡ ವಿಧಿಸಿ ಬೆಳಗಾವಿಯ 10ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆದೇಶ ಹೊರಡಿಸಿದೆ.

ಈ ಮಹತ್ವದ ತೀರ್ಪನ್ನು ನ್ಯಾಯಾಧೀಶರಾದ ಎಚ್. ಎಸ್. ಮಂಜುನಾಥ್ ಅವರು ಪ್ರಕಟಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಸುದೀರ್ಘ ವಿಚಾರಣೆ, ಸಾಕ್ಷ್ಯಾಧಾರಗಳು ಹಾಗೂ ಸಾಕ್ಷಿಗಳ ಹೇಳಿಕೆಗಳನ್ನು ಸಮಗ್ರವಾಗಿ ಪರಿಶೀಲಿಸಿದ ಬಳಿಕ ಆರೋಪಿಗಳು ಅಪರಾಧ ಎಸಗಿರುವುದು ಸ್ಪಷ್ಟವಾಗಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

**ಪ್ರಕರಣದ ಹಿನ್ನೆಲೆ:** ಈ ಅಮಾನುಷ ಘಟನೆ 2023ರ ಡಿಸೆಂಬರ್ ತಿಂಗಳಲ್ಲಿ ಬೆಳಗಾವಿ ಜಿಲ್ಲೆಯ ವಂಟಮೂರಿ ಗ್ರಾಮದಲ್ಲಿ ನಡೆದಿತ್ತು. ಯುವಕನೊಬ್ಬ ಯುವತಿಯೊಂದಿಗೆ ಪ್ರೀತಿಸಿ ಮನೆ ಬಿಟ್ಟು ಓಡಿಹೋದ ಹಿನ್ನೆಲೆಯಲ್ಲಿ, ಯುವತಿಯ ಕುಟುಂಬಸ್ಥರು ಪ್ರತೀಕಾರ ತೀರಿಸಿಕೊಳ್ಳುವ ಉದ್ದೇಶದಿಂದ ಯುವಕನ ತಾಯಿಯ ಮೇಲೆ ಕ್ರೂರವಾಗಿ ದಾಳಿ ನಡೆಸಿದ್ದರು ಎಂಬುದು ತನಿಖೆಯಿಂದ ಬೆಳಕಿಗೆ ಬಂದಿತ್ತು.

ಆ ಮಹಿಳೆಯನ್ನು ಮನೆಗಳಿಂದ ಬಲವಂತವಾಗಿ ಎಳೆದುಕೊಂಡು ಬಂದು, ಸಾರ್ವಜನಿಕವಾಗಿ ವಿವಸ್ತ್ರಗೊಳಿಸಿ, ವಿದ್ಯುತ್ ಕಂಬಕ್ಕೆ ಕಟ್ಟಿ ಅಮಾನುಷವಾಗಿ ಹಲ್ಲೆ ನಡೆಸಲಾಗಿತ್ತು. ಈ ಹಲ್ಲೆಯ ದೃಶ್ಯಗಳನ್ನು ಕೆಲವರು ಮೊಬೈಲ್‌ನಲ್ಲಿ ವಿಡಿಯೋ ಮಾಡಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದರು. ಕೆಲವೇ ಗಂಟೆಗಳಲ್ಲಿ ವಿಡಿಯೋ ವೈರಲ್ ಆಗಿ ರಾಜ್ಯಾದ್ಯಂತ ಭಾರೀ ಆಕ್ರೋಶಕ್ಕೆ ಕಾರಣವಾಗಿತ್ತು.

**ನ್ಯಾಯಾಲಯದ ತೀರ್ಪು:** ಪ್ರಕರಣದಲ್ಲಿ ಒಟ್ಟು 13 ಆರೋಪಿಗಳು ಇದ್ದರೂ, ಅವರಲ್ಲಿ ಒಬ್ಬರು ಬಾಲಾಪರಾಧಿಯಾಗಿರುವುದರಿಂದ ಆತನ ವಿಚಾರಣೆಯನ್ನು ಬಾಲ ನ್ಯಾಯ ಮಂಡಳಿಗೆ ವರ್ಗಾಯಿಸಲಾಗಿತ್ತು. ಉಳಿದ 12 ಮಂದಿ ಆರೋಪಿಗಳ ವಿರುದ್ಧ ನಡೆದ ವಿಚಾರಣೆಯಲ್ಲಿ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಲಯ ಅವರು ದೋಷಿಗಳು ಎಂದು ಘೋಷಿಸಿದೆ.

**ನ್ಯಾಯಾಲಯವು ಆರೋಪಿಗಳಿಗೆ**ತಲಾ ಐದು ವರ್ಷಗಳ ಕಠಿಣ ಜೈಲು ಶಿಕ್ಷೆ, ಹಾಗೂ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಹಣದ ದಂಡ ವಿಧಿಸಿದೆ.ಶಿಕ್ಷೆಗೊಳಗಾದವರಲ್ಲಿ ಬಸಪ್ಪ ನಾಯಿಕ, ರಾಜು ನಾಯಿಕ ಸೇರಿದಂತೆ ಒಟ್ಟು 12 ಮಂದಿ ಸೇರಿದ್ದಾರೆ. ಈ ತೀರ್ಪು ಮಹಿಳೆಯರ ಮೇಲಿನ ಹಿಂಸೆ ಹಾಗೂ ಸಾರ್ವಜನಿಕವಾಗಿ ಅವಮಾನ ಮಾಡುವಂತಹ ಕೃತ್ಯಗಳಿಗೆ ಕಠಿಣ ಸಂದೇಶ ನೀಡಿದ್ದು, ಇಂತಹ ಅಪರಾಧಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂಬುದನ್ನು ನ್ಯಾಯಾಲಯ ಸ್ಪಷ್ಟಪಡಿಸಿದೆ. ಪ್ರಕರಣದ ತೀರ್ಪು ನ್ಯಾಯಕ್ಕಾಗಿ ಹೋರಾಡುತ್ತಿದ್ದ ಸಂತ್ರಸ್ತೆ ಹಾಗೂ ಮಹಿಳಾ ಹಕ್ಕು ಸಂಘಟನೆಗಳಿಗೆ ಮಹತ್ವದ ನೈತಿಕ ಜಯವೆಂದು ಪರಿಗಣಿಸಲಾಗಿದೆ.

# ಕಲಿಕಾ ಮಕ್ಕಳಿಗೆ ಉಚಿತ ನೋಟ್ ಪುಸ್ತಕ ವಿತರಣೆ



**ದೇವನಹಳ್ಳಿ :-** ದೇಶದಲ್ಲಿ ಶಿಕ್ಷಣದ ವ್ಯವಸ್ಥೆ ಸಮಾ ಜದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಿದೆ ಜೊತೆಗೆ ಪ್ರತಿಭಾವಂತ ಮಕ್ಕಳಿಗೆ ಕೈಲಾದ ಸೇವೆ ಯನ್ನು ನೀಡುವ ಸದುದ್ದೇಶದಿಂದ ಉಚಿತ ನೋಟ್ ಪುಸ್ತಕಗಳನ್ನು ವಿತರಿಸಲಾಗುತ್ತಿದೆ ಎಂದು ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಜಿ.ಮಾರಪ್ಪ ತಿಳಿಸಿರುತ್ತಾರೆ.


ದೇವನಹಳ್ಳಿ ಪಟ್ಟಣದ ಗೋರಿಪಾಳ್ಯದಲ್ಲಿ ಮಾರಪ್ಪ ಅವರ ಹುಟ್ಟು ಹಬ್ಬದ ಪ್ರಯುಕ್ತ ಬಡ ವಿದ್ಯಾರ್ಥಿ ಗಳಿಗೆ ಉಚಿತ ನೋಟ್ ಪುಸ್ತಕ ವಿತರಿಸಿದ ಬಳಿಕ ಮಾತನಾಡಿ, ಮಾದಿಗ ಸಮುದಾಯ ಅತಿ ಹೆಚ್ಚು ತುಳಿತಕ್ಕೆ ಒಳಗಾದ ಜನಾಂಗವಾಗಿದೆ. ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಹಾಗೂ ಮಾಜಿ ಉಪ ಪ್ರಧಾನಿ ಬಾಬು ಜಗಜೀವರಾಂ ಅವರ ಬಗ್ಗೆ ಭವ್ಯ ಇತಿಹಾಸ ತಿಳಿಯಬೇಕು. ನಮ್ಮ ಜನಾಂಗ ಆರ್ಥಿಕವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ರಾಜಕೀಯ ಕ್ಷೇತ್ರದಲ್ಲೂ ಕೂಡ ಮುಂಚೂಣಿಗೆ ಬರಲು ಎಲ್ಲರೂ ಸಂಘಟಿತರಾಗಬೇಕು.

ಮುಂದಿನ ದಿನಗಳಲ್ಲಿ ನಮ್ಮ ವಾರ್ಡಿನ ಪ್ರತಿಯೊಂದು ಮನೆಗಳಿಗೂ ಭೇಟಿ ನೀಡಿ ನಮ್ಮ ಹಕ್ಕು ಗಳನ್ನು ಪ್ರಡೆಯಲು ಎಂತಹ ಹೋರಾಟ ವಿದ್ದರೂ ಹಿಂದೆ ಸರಿಯದೆ ಮುಂಚೂಣಿಯಲ್ಲಿ ನಿಲ್ಲಬೇಕು ಆಗ ಮಾತ್ರ ನಮ್ಮೆಲ್ಲ ಸೌಲಭ್ಯಗಳು ಯಥಾವತ್ತಾಗಿ ಬರಲಿವೆ.

ಈಗಿನ ಮಕ್ಕಳೆ ನಾಳಿನ ಪ್ರಜೆಗಳು ಪೋಷಕರಿಗೆ ಹೆಚ್ಚು ಭಾರವಾಗದಂತೆ ಇರುವ ಸಂಪನ್ಮೂಲಗಳಲ್ಲಿ ಹೆಚ್ಚು ಕಲಿಕೆಗೆ ಆಸಕ್ತಿ ತೋರಿ ಅಭಿವೃದ್ಧಿ ಹೊಂದ ಬೇಕಿದೆ ಎಂದು ಪುಟಾಣಿ ಮಕ್ಕಳಿಗೆ ತಿಳುವಳಿಕೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಮಾರಮ್ಮ, ಮದ್ದೂರಮ್ಮ ಸೇವಾ ಟ್ರಸ್ ಪದಿಕಾರಿಗಳಾದ ಕಾಟಿ, ನವೀನ್, ಗೋಪಿ, ಮಲ್ಲೇಶ್, ಪ್ರಸನ್ನ,, ನಾರಾಯಣಸ್ವಾಮಿ,ಮುನಿರಾಜು, ಚಿಕ್ಕವೆಂಕಟೇಶ್, ಪ್ರಶಾಂತ್, ರಾಜೇಶ್, ಮಂಜುನಾಥ್ ಇತರರು ಹಾಜರಿದ್ದರು.

# ಅಪ್ಪ, ಅಮ್ಮ ಕ್ಷಮಿಸಿ ಆತ್ಮಹತ್ಯೆಗೂ ಮುನ್ನ ಸಹೋದರಿಯರು ಬರೆದಿದ್ದ ಡೆತ್ ನೋಟ್ ಪತ್ತೆ




**ಜೈಪುರ:** ಮಹಿಳೆಯೊಬ್ಬರನ್ನು ಅತ್ಯಂತ ಕ್ರೂರವಾಗಿ ಕೊಲೆ ಮಾಡಿ, ಆಕೆಯ ಬಳಿ ಇದ್ದ ಸುಮಾರು 6.5 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ದುಷ್ಕರ್ಮಿಗಳು ದೋಚಿರುವ ಭೀಕರ ಘಟನೆ ರಾಜಸ್ಥಾನದಲ್ಲಿ ಬೆಳಕಿಗೆ ಬಂದಿದೆ. ಮಹಿಳೆಯ ಗಂಟಲು ಸೀಳಿ, ಕಾಲುಗಳನ್ನು ಕತ್ತರಿಸಿದ ಬಳಿಕ ಆಕೆಯ ದೇಹದಲ್ಲಿದ್ದ ಆಭರಣಗಳನ್ನು ಕಳವು ಮಾಡಿ ದುಷ್ಕರ್ಮಿಗಳು ಪರಾರಿಯಾಗಿದ್ದಾರೆ.

ಈ ಅಮಾನುಷ ಘಟನೆ ಕೊಡ್ಮೈ ಗ್ರಾಮದಲ್ಲಿ ನಡೆದಿದ್ದು, ದೇವಿ ಎಂಬ ಮಹಿಳೆ ಮೇಕೆ ಮೇಯಿಸಲು ಎಂದಿನಂತೆ ಕಾಡಿನೊಳಗೆ ತೆರಳಿದ್ದಳು. ಸಂಜೆ ಹೊತ್ತಾದರೂ ಮನೆಗೆ ಹಿಂತಿರುಗದ ಹಿನ್ನೆಲೆಯಲ್ಲಿ ಕುಟುಂಬಸ್ಥರಲ್ಲಿ ಆತಂಕ ಮೂಡಿತ್ತು. ಆಕೆಯನ್ನು ಹುಡುಕಲು ಕುಟುಂಬದವರು ಹಾಗೂ ಗ್ರಾಮಸ್ಥರು ಪ್ರಯತ್ನ ನಡೆಸಿದರು. ಈ ನಡುವೆ, ದೇವಿಯ ಮಗ ತಾಯಿಯನ್ನು ಹುಡುಕಿಕೊಂಡು ಕಾಡಿನೊಳಗೆ ತೆರಳಿದಾಗ, ಗ್ರಾಮದ ಹೊರವಲಯದಿಂದ ಸುಮಾರು ಮೂರು ಕಿಲೋಮೀಟರ್ ದೂರದಲ್ಲಿ ತಾಯಿಯ ಶವ ಪತ್ತೆಯಾಗಿದೆ.

ಮಹಿಳೆಯ ಶವವನ್ನು ಕಂಡ ಮಗ ಬೆಚ್ಚಿಬಿದ್ದಿದ್ದು, ತಕ್ಷಣ ಗ್ರಾಮಸ್ಥರಿಗೆ ಮತ್ತು ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಮೃತದೇಹದ ಪರಿಶೀಲನೆಯ ವೇಳೆ ಮಹಿಳೆಯ ಕಾಲುಗಳು ಕತ್ತರಿಸಲ್ಪಟ್ಟಿದ್ದು, ಗಂಟಲು ಸೀಳಿರುವುದು ಕಂಡುಬಂದಿದೆ. ಸಂತ್ರಸ್ತೆಯ ದೇಹದಲ್ಲಿದ್ದ ಚಿನ್ನದ ಪೆಂಡೆಂಟ್, ಕಿವಿಯೋಲೆಗಳು ಮತ್ತು ಮೂಗುತಿ ಸೇರಿದಂತೆ ಎಲ್ಲಾ ಚಿನ್ನಾಭರಣಗಳನ್ನು ದುಷ್ಕರ್ಮಿಗಳು ಕಳವು ಮಾಡಿಕೊಂಡಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನೀಲ್ ಕಮಲ್ ಮೀನಾ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮಹಿಳೆಯನ್ನು ಕೊಲೆ ಮಾಡಿ ಆಭರಣ ದೋಚಿದ ಆರೋಪಿಗಳ ಪತ್ತೆಗೆ ವಿಶೇಷ ತಂಡಗಳನ್ನು ರಚಿಸಿದ್ದು, ತನಿಖೆ ತೀವ್ರಗೊಳಿಸಲಾಗಿದೆ. ಆದರೆ ಈವರೆಗೆ ಯಾವುದೇ ಆರೋಪಿಗಳನ್ನು ಬಂಧಿಸಲಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

# ಕಲಾಪದಲ್ಲಿ ವಿಬಿಜಿ ರಾಮ್ ಜಿ ಯೋಜನೆ ಕುರಿತಂತೆ ಸಿಎಂ ಚರ್ಚೆ



**ಕರ್ನಾಟಕ** ಹಿಂದೆ ಜಾರಿಯಲ್ಲಿದ್ದ ಮನರೇಗಾ ಅಡಿಯಲ್ಲಿ ಎಲ್ಲಾ ವರ್ಗದ ಜನರಿಗೆ ಕೆಲಸವಿತ್ತು. ಮನರೇಗಾ ಬರುವ ಮುನ್ನ ಕೆಲಸ ಹುಡುಕಿಕೊಂಡು ಜನ ವಲಸೆ ಹೋಗುತ್ತಿದ್ದರು.

ಮನ ರೇಗಾ ಅಡಿಯಲ್ಲಿ ಬೇಡಿಕೆಗೆ ಅನುಸಾರವಾಗಿ ಕೆಲಸ ಒದಗಿಸಲಾಗುತ್ತಿತ್ತು. ಮನಮೋಹನ್ ಸಿಂಗ್ ಅವರು ಪ್ರಧಾನಿಗಳಾಗಿದ್ದಾಗ ಆಹಾರ ಭದ್ರತೆ, ಶಿಕ್ಷಣ,ಮಾಹಿತಿ ಹಕ್ಕು, ಅರಣ್ಯ ವಾಸಿಗಳ ಹಕ್ಕು ನೀಡಿದರು. ಬಡ ವರ್ಗದ ಜನರಿಗೆ ಅನುಕೂಲ ಕಲ್ಪಿಸಲಾಯಿತು.

ಮಕ್ಕಳನ್ನು ಶಾಲೆಗೆ ಕಳುಹಿಸಿ ಕೂಲಿಗೆ ಹೋಗುತ್ತಿದ್ದರು. ವಿಬಿಜಿ ರಾಮ್ ಜಿ ಪ್ರಕಾರ ಕೇಂದ್ರ ಸರ್ಕಾರ ಕೆಲಸ ಎಲ್ಲಿ ನೀಡಬೇಕೆಂದು ತೀರ್ಮಾನಿಸುತ್ತದೆ.

ಸಂವಿಧಾನದ 73/74 ತಿದ್ದುಪಡಿಯ ಪ್ರಕಾರ ವಿಕೇಂದ್ರೀಕರಣದಡಿ ಗ್ರಾಮ ಸಭೆಯಲ್ಲಿ ಎಲ್ಲಿ ಕೆಲಸವಾಗಬೇಕೆಂದು ತೀರ್ಮಾನವಾಗುತ್ತಿತ್ತು.ಈಗ ಅದಕ್ಕೆ ತಿಲಾಂಜಲಿ ಇಡಲಾಗಿದೆ.

ಜವಾಹರ್ ಲಾಲ್ ನೆಹರೂ ಅವರು ಒಂದು ಪಂಚಾಯತಿಯಲ್ಲಿ ಒಂದು ಶಾಲೆ, ಪಂಚಾಯತಿ, ಸಹಕಾರ ಸಂಘ ಇರಬೇಕು ಎಂದಿದ್ದರು. ಮಹಾತ್ಮಾ ಗಾಂಧಿಯವರು ಗ್ರಾಮಗಳ ಪ್ರಗತಿಯಾಗದೆ ದೇಶ ಪ್ರಗತಿಯಾಗುವುದಿಲ್ಲ ಎಂದಿದ್ದರು.

ಗ್ರಾಮಗಳು ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿಯುತವಾಗಬೇಕು. ಕರ್ನಾಟಕದಲ್ಲಿ 71.18 ಲಕ್ಷ ಕಾರ್ಮಿಕರಿದ್ದಾರೆ. ಈ ಪೈಕಿ 51% ಗಿಂತ ಹೆಚ್ಚು ಮಹಿಳೆಯರು ಇದ್ದಾರೆ.

ಮನರೇಗಾ ಇಲ್ಲದೇ ಹೋಗಿದ್ದರೆ ಕೋವಿಡ್ 19 ರ ಸಂದರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಸಹಾಯವಾಯಿತು. ಈಗ ಗ್ರಾಮ ಸಭೆಯೂ ಇಲ್ಲ, ಪಂಚಾಯತಿ ಪ್ರಕಾರ ತೀರ್ಮಾನವಾಗುವುದಿಲ್ಲ. ಉದ್ಯೋಗಕ್ಕೆ ಕೊಡಲಿ ಪೆಟ್ಟು ನೀಡಲಾಗಿದೆ.

ಈಗ ವರ್ಷದಲ್ಲಿ 60 ದಿನ ಕೆಲಸವಿಲ್ಲ. ಕೃಷಿ ಚಟುವಟಿಕೆಗಳು ಇದ್ದ ಸಂದರ್ಭದಲ್ಲಿ ಕೆಲಸಗಳಿಲ್ಲ. ಮನರೇಗಾ ಅಡಿಯಲ್ಲಿ ಕೃಷಿ ಚಟುವಟಿಕೆಗಳಿದ್ದಾಗಲೂ ಕೆಲಸ ಮಾಡಬಹುದಾಗಿತ್ತು.ಗುತ್ತಿಗೆ ದಾರರಿಗೆ ನಿಷೇಧವಿತ್ತು.

ಮನರೇಗಾ ಕಾಯ್ದೆಯಲ್ಲಿ ಗುತ್ತಿಗೆ ಎಂಬ ಪದವೇ ಇಲ್ಲ. ಈಗ ಎಲ್ಲಾ ಗುತ್ತಿಗೆದಾರರು ಪ್ರವೇಶ ಮಾಡಬಹುದಾಗಿದೆ. ಸೇತುವೆ, ಹೆದ್ದಾರಿ, ಮುಂತಾದ ದೊಡ್ಡ ಕೆಲಸಗಳಿಗೆ ಜನ ಹೋಗಬೇಕಾಗುತ್ತದೆ. ಪಂಚಾಯತಿಗಳಿಗೆ ಕೊಟ್ಟಿದ್ದ ಅಧಿಕಾರವನ್ನು ಕಸಿದುಕೊಳ್ಳಲಾಗಿದೆ.

ಮನರೇಗಾ ರದ್ದು ಮಾಡಿ ತಂದಿರುವ ವಿಬಿಜಿ ರಾಮ್ ಜಿ ಕಾಯ್ದೆಯ ದುಷ್ಪರಿಣಾಮಗಳೆಂದರೆ,: ನಿರುದ್ಯೋಗದ ಪ್ರಮಾಣ ಹೆಚ್ಚಳವಾಗುತ್ತದೆ, ಉದ್ಯೋಗದಲ್ಲಿ ಮಹಿಳೆಯರ ಪಾಲುದಾರಿಕೆ ಇಳಿಕೆಯಾಗುತ್ತದೆ.

ಕನಿಷ್ಠ ವೇತನದ ರಕ್ಷಣೆ ಇಲ್ಲದೆ ಕಾರ್ಮಿಕರು ಸಂಕಷ್ಟಕ್ಕೆ ತಳ್ಳಲ್ಪಡುತ್ತಾರೆ. ದಲಿತ ಮತ್ತು ಆದಿವಾಸಿಗಳ ಕುಟುಂಬಗಳ ಮೇಲೆ ಅಧಿಕ ಒತ್ತಡ ಸೃಷ್ಟಿಯಾಗುತ್ತದೆ. ಗ್ರಾಮೀಣಾಭಿವೃದ್ಧಿಗೆ, ಗ್ರಾಮೀಣ ಬದುಕಿಗೆ ಮಾರಕವಾದ ಕಾಯ್ದೆ.

ಪ್ರತಿ ವರ್ಷ ನೂರು ದಿನಗಳ ಉದ್ಯೋಗ ಖಾತ್ರಿ ಇತ್ತು. ಪರಿಚ್ಛೇದ 5 ಕಲಂ (1) ಪ್ರಕಾರ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿ ಬಜೆಟ್ ಮಾಡಿದರೆ ಮಾತ್ರ ಕೆಲಸ ಸಿಗುತ್ತದೆ. ಇದರಿಂದ ಗ್ರಾಮೀಣ ಪ್ರದೇಶದ ಕೂಲಿಕಾರರ ಕೆಲಸ ಕಿತ್ತುಕೊಂಡಂತಾಗಿದೆ. 125 ದಿನ ಕೊಡುವುದಾಗಿ ಹೇಳಲಾಗಿದೆ. 60: 40 ಅನುದಾನದ ಅನುಪಾತ ಮಾಡಿರುವುದು ಕೇಂದ್ರ ಪುರಸ್ಕೃತ ಯೋಜನೆಯಂತಿದೆ.

ಪ್ರಧಾನಿಗಳಿಗೆ ಮಹಾತ್ಮ ಗಾಂಧಿ ಅವರ ಹೆಸರು ತೆಗೆದುಹಾಕಲು ಈಗ ಜ್ಞಾನೋದಯವಾಗಿದೆಯೇ? ಮನರೇಗಾ ಅಡಿ ಪ್ರತಿ ಪಂಚಾಯತಿಗೆ ಕನಿಷ್ಠ 1 ಕೋಟಿವರೆಗೂ ಕೆಲಸ ನೀಡಬಹುದಾಗಿತ್ತು. ಈಗ ಅದಕ್ಕೆ ಅವಕಾಶವಿಲ್ಲ ಏಕೆಂದರೆ ಅನೇಕ ರಾಜ್ಯಗಳು ಆರ್ಥಿಕ ಮುಗ್ಗಟ್ಟು ಎದುರಿಸುತ್ತಿವೆ. ಕೇಂದ್ರ ಸರ್ಕಾರ ರಾಜ್ಯಗಳಿಗೆ ಕೊಡಬೇಕಾದ ಅನುದಾನ ಕೊಡುವುದಿಲ್ಲ. ಹಣಕಾಸು ಆಯೋಗ ಶಿಫಾರಸು ಮಾಡಿದ ಅನುದಾನವನ್ನೂ ಬಿಡುಗಡೆ ಮಾಡುವುದಿಲ್ಲ.

**15 ನೇ ಹಣಕಾಸು ಆಯೋಗದ ವತಿಯಿಂದ ರಾಜ್ಯಕ್ಕೆ 15,000 ಕೋಟಿ ನಷ್ಟವಾಗಿದೆ:** ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್ ನಲ್ಲಿ 5300 ಕೋಟಿ ರೂಗಳನ್ನು ಬಿಡುಗಡೆ ಮಾಡುವುದಾಗಿ ಹೇಳಿದ್ದರು. ಇಂದಿನವರೆಗೂ ಅನುದಾನ ಕೊಟ್ಟಿಲ್ಲ. ಇದಕ್ಕೆ ಯಾವ ಬಳಕೆ ಪ್ರಮಾಣ ಪತ್ರವನ್ನು ನೀಡಬೇಕು?ಂ

ಪ್ರತಿ ಗ್ರಾಮವೂ ಯೋಜನೆಯನ್ನು ಜಾರಿ ಮಾಡಬಹುದಾಗಿತ್ತು. ಈಗ ವರ್ಷದ 10 ತಿಂಗಳು ಮಾತ್ರ ಕೆಲಸ ಮಾಡಬಹುದು. ಕೂಲಿಯ ಮೊತ್ತವನ್ನು ಪುರುಷರು ಮತ್ತು ಮಹಿಳೆಯರಿಗೆ ಸಮಾನವಾಗಿ ಕೊಡಲಾಗುತ್ತಿತ್ತು. ಕೂಲಿಯನ್ನು ಬೆಲೆಯೇರಿಕೆಗೆ ಸರಿದೂಗಿಸಲಾಗುತ್ತಿತ್ತು. ಈಗಿನ ಕಾಯ್ದೆ ಪ್ರಕಾರ ಕೂಲಿಗೆ ಯಾವುದೇ ಖಾತ್ರಿ ಇಲ್ಲ. ಗ್ರಾಮ ಪಂಚಾಯಿತಿಗೆ ನೀಡುವ ಅನುದಾನದ ಮೇಲೆ ನಿರ್ಧಾ ರವಾಗುತ್ತದೆ. ಕೂಲಿ ಯನ್ನು ಕೇಂದ್ರ ಸರ್ಕಾರವೇ ನೀಡುತ್ತಿತ್ತು. ಈಗ ಕೇಂದ್ರ ಸರ್ಕಾರ 60 ರಷ್ಟು ಹಾಗೂ ರಾಜ್ಯ ಸರ್ಕಾರ ನಲವತ್ತರಷ್ಟು ಅನುದಾನ ನೀಡಬೇಕೆಂದಿದೆ.

ಈಗ ಅನೇಕ ರಾಜ್ಯಗಳು ಅನುದಾನದ ಕೊರತೆಯನ್ನು ಎದುರಿಸುತ್ತಿವೆ. ಈಗಿನ ಪ್ರಧಾನಿಗಳು ಗುಜರಾತ್ ಮುಖ್ಯಮಂತಿ ್ರಗಳಾಗಿದ್ದಾಗ ಶೇ. 50ರಷ್ಟು ನೀಡಬೇಕೆಂದು ಒತ್ತಾಯಿಸಿದರು. ಮುಖ್ಯಮಂತ್ರಿಗಳಾಗಿದ್ದಾಗ ಒಂದು ನಿಲುವು, ಪ್ರಧಾನಿಗಳಾದಾಗ ಮತ್ತೊಂದು ನಿಲುವೇ?

ಮನರೇಗಾ ದಲ್ಲಿ ಆಸ್ತಿ ಸೃಷ್ಟಿಸುವ ಕೆಲಸಗಳನ್ನು ತೆಗೆದುಕೊಳ್ಳಲಾಗುತ್ತಿತ್ತು. ಹೊಸ ಕಾಯ್ದೆ ಅಡಿ ಸರಬರಾಜುಆಧಾರಿತ ಕೆಲಸಗಳನ್ನು ತೆಗೆದುಕೊಳ್ಳಲಾಗುತ್ತಿದೆ. ವಿಬಿಜಿ ಗ್ರಾಮ್ ಜಿ ಜಾರಿಗೆ ತಂದು ಗ್ರಾಮ ಸ್ವರಾಜ್ಯ ಪರಿಕಲ್ಪನೆಯನ್ನು ಸಂಪೂರ್ಣ ಧ್ವಂಸ ಮಾಡಲಾಗಿದೆ.

**ಮನರೇಗಾ ಮತ್ತು ವಿಬಿಜಿ ರಾಮ್ ಜಿ ಕಾಯ್ದೆ ಗೆ ಇರುವ ವ್ಯತ್ಯಾಸಗಳು.** 2008 ರಲ್ಲಿ ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಮನರೇಗಾ ಅಡಿ 31.54 ಲಕ್ಷ ಕುಟುಂಬಗಳಿಗೆ ಕೆಲಸ ಒದಗಿಸಲಾಗಿದೆ. 13.24 ಕೋಟಿ ಮಾನವ ದಿನಗಳ ಸೃಜನೆಯಾಗಿದ್ದು , ದುಡಿಯೋಣ ಬಾ, ಕೃಷಿ ಹೊಂಡ ಅಭಿಯಾನ ಹಮ್ಮಿಕೊಂಡಿರುವ ಬಗ್ಗೆ ರಾಜ್ಯಪಾಲರ ಭಾಷಣದಲ್ಲಿ ಹೇಳಿಸಲಾಗಿತ್ತು.

ಬಸವರಾಜ ಬೊಮ್ಮಾಯಿ ಯವರು ಕೂಡ ಮನ ರೇಗಾ ಯೋಜನೆಗೆ ಹೆಚ್ಚಿನ ಒತ್ತು ನೀಡಿರುವ ಬಗ್ಗೆ ಹೇಳಿದ್ದು, ಈಗ ಇದ್ದಕ್ಕಿಂದ್ದಂತೆ ರದ್ದು ಮಾಡಲಾಗಿದೆ.

ವಿಬಿಜಿ ರಾಮ್ ಜಿ ಯೋಜನೆಯಿಂದ ಉದ್ಯೋಗವಿಲ್ಲದೆ ಗ್ರಾಮೀಣ ಜನರು ಈಗ ವಲಸೆ ಹೋಗಲು ಪ್ರಾರಂಭಿಸಿದ್ದು, ಗ್ರಾಮೀಣ ಜನರ ಬದುಕನ್ನು ಕಸಿದುಕೊಳ್ಳುವ ಕೆಲಸವಾಗಿದೆ. ಸಾಂವಿಧಾನಿಕ ಹಕ್ಕನ್ನು ಗ್ರಾಮೀಣ ಜನರಿಂದ ಕಸಿದುಕೊಳ್ಳಲಾಗಿದೆ.

## ಡಾ. ಸಂಗನ ಬಸಪ್ಪ ಬಿರಾದಾರ್ ಅವರ ಮನೆಗೆ ಹೆಚ್ ಎನ್ ಗಂಗಾಧರ್ ಭೇಟಿ



**ಪೀಣ್ಯ ದಾಸರಹಳ್ಳಿ:** ಕ್ಷೇತ್ರದ ರಾಜಗೋಪಾಲ ನಗರ ವಾರ್ಡಿನ ಕೆಂಪೇಗೌಡ ಲೇಔಟ್ ನಲ್ಲಿ ಇರುವ ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗನ ಬಸಪ್ಪ ಬಿರಾದಾರ್ ಅವರ ಮನೆಗೆ ದಿಢೀರನೇ

ಬಿಬಿಎಂಪಿ ಮಾಜಿ ಸದಸ್ಯ ಹಾಗೂ ತೋಟಗಾರಿಕೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಹೆಚ್ ಎನ್ ಗಂಗಾಧರ್ ಅವರು ಭೇಟಿ ನೀಡಿ ದರು. ಡಾ. ಬಿರಾದಾರ್ ಅವರು ಅವರಿಗೆ ಲಭಿಸಿರುವ ಪ್ರಶಸ್ತಿಗಳ ಬಗ್ಗೆ ಸಂಪೂರ್ಣ ಮಾಹಿತಿ ಬಿರಾದಾರ್ ಗಂಗಾಧರ್ ಅವರಿಗೆ ತಿಳಿಸಿದರು ಹಾಗೂ ಶ್ರೇಷ್ಠ ನಿವೃತ್ತ ಲೋಕಾಯುಕ್ತ ಹಾಗೂ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅವರ ಜೊತೆಗೆ ಹಲವಾರು ಬಾರಿ ವೇದಿಕೆ ಹಂಚಿಕೊಂಡಿದ್ದು ಬಹಳ ಖುಷಿ ತಂದಿದೆ ಎಂದು ಹೆಚ್ ಎನ್ ಗಂಗಾಧರ್ ಅವರಿಗೆ ಮನವರಿಕೆ ಮಾಡಿಕೊಟ್ಟರು.

ನಂತರ ಉತ್ತರ ಕರ್ನಾಟಕದಲ್ಲಿ ತಿಂಡಿಗಳಲ್ಲಿ ಒಂದಾದ ಕಡಲೆ ಪುರಿ ವಗ್ಗರಣೆ ಕೊಡಬೆಳೆ ಸೇವಿಸಿದ್ದರು. ಡಾ. ಸಂಗನ ಬಸಪ್ಪ ಬಿರಾದಾರ್ ಅವರಿಗೆ ಮುಂಬರುವ ಮಾರ್ಚ್ ತಿಂಗಳಲ್ಲಿ ಗೋವಾದಲ್ಲಿ ನಡೆಯುವ ಕನ್ನಡ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಬಿರಾದಾರ್ ಅವರಿಗೆ ಶಾಲು ಹೊದಿಸಿ ಶುಭ ಹಾರೈಸಿದರು.

ಇದೆ ವೇಳೆ ಮಾಜಿ ಪಾಲಿಕೆ ಸದಸ್ಯ ಹಾಗೂ ತೋಟಗಾರಿಕೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಹೆಚ್ ಎನ್ ಗಂಗಾಧರ್ ಅವರಿಗೆ ಬಿರಾದಾರ್ ರವರು ಬಿಜೆಪಿ ಮಾಜಿ ಅಧ್ಯಕ್ಷ ಹರೀಶ್ ಜಿಕೆ ಡಬ್ಲ್ಯೂ ಲೇಔಟ್, ಎಸ್ ವಿ ಎಸ್ ಶಿಕ್ಷಣ ಸಂಸ್ಥೆಯ ಫೌಂಡರ್ ಕಾರ್ಯದರ್ಶಿ ಅರ್ಕೇಶ್ ಮತ್ತು ಕೈಗಾರಿಕಾ ಉದ್ಯಮಿ ಹಾಗೂ ಬಿಜೆಪಿ ಯುವ ಮುಖಂಡ ಲಿಖಿನ್ ಸೇರಿದಂತೆ ಮುಂತಾದವರು ಶಾಲು ಹೊದಿಸಿ ಗೌರವಿಸಿದರು.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812
8217606793

## ಪವನ್ ಕಲ್ಯಾಣ್ ಹೊಸ ಸಿನಿಮಾ ಬಿಡುಗಡೆ ದಿನಾಂಕ ಘೋಷಣೆ

**ಹೈದರಾಬಾದ್:** ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ರಾಜಕೀಯ ನಾಯಕನಾಗಿರುವುದರ ಜೊತೆಗೆ ಟಾಲಿವುಡ್‌ನ ಅಗ್ರ ತಾರೆಯೂ ಹೌದು. ಪವನ್ ಕಲ್ಯಾಣ್ ಸಕ್ರಿಯ ರಾಜಕೀಯಕ್ಕೆ ಇಳಿದ ಬಳಿಕ ಅವರು ಸಿನಿಮಾಗಳಲ್ಲಿ ನಟಿಸುವುದಿಲ್ಲ ಎಂಬ ಮಾತುಗಳು ಕೇಳಿಬಂದಿದ್ದವು. ಆದರೆ ಆಂಧ್ರ ಪ್ರದೇಶದ ಡಿಸಿಎಂ ಆಗಿದ ನಂತರವೂ ಪವನ್ ಕಲ್ಯಾಣ್ ತಮ್ಮ ಸಿನಿ ಅಭಿಮಾನಿಗಳಿಗೆ ನಿರಾಸೆ ಮಾಡದೆ, ಒಂದರ ನಂತರ ಒಂದಾಗಿ ಸಿನಿಮಾಗಳ ಮೂಲಕ ತೆರೆಯ ಮೇಲೆ ಕಾಣಿಸಿಕೊಳ್ಳುತ್ತಿದ್ದಾರೆ.

ಪವನ್ ಕಲ್ಯಾಣ್ ಡಿಸಿಎಂ ಆದ ಬಳಿಕ ಅವರ ನಟನೆಯ ಮೊದಲ ಸಿನಿಮಾ ಊಚಿಡಿ ಊಚಿಡಿಚಿ ಗಿಜಜಡಿಚಿ ಒಚಿಟಟಣ ಬಿಡುಗಡೆಗೊಂಡಿತ್ತು. ಈ ಸಿನಿಮಾ ಭಾರಿ ನಿರೀಕ್ಷೆ ಮೂಡಿಸಿದ್ದರೂ ಬಾಕ್ಸ್ ಆಫೀಸ್‌ನಲ್ಲಿ ಸಾಧಾರಣ ಯಶಸ್ಸನ್ನಷ್ಟೇ ಗಳಿಸಿತು. ಅದಾದ ಬಳಿಕ ತೆರೆಗೆ ಬಂದ ಔಉ ಸಿನಿಮಾ ಮಾತ್ರ ಪವನ್ ಅಭಿಮಾನಿಗಳಲ್ಲಿ ಭಾರೀ ಸಂಭ್ರಮ ಮೂಡಿಸಿ, ಬ್ಲಾಕ್‌ಬಸ್ಟರ್ ಯಶಸ್ಸು ದಾಖಲಿಸಿತು.

ಈಗ ಪವನ್ ಕಲ್ಯಾಣ್ ನಟನೆಯ ಮತ್ತೊಂದು ಬಹುನಿರೀಕ್ಷಿತ ಸಿನಿಮಾ ಗ್ಣಚಿಚಿಜ ಖಚಿರಿಂಚಿಣ ಖುಟಿರು ಬಿಡುಗಡೆಗೆ ಸಿದ್ಧವಾಗಿದೆ. ಈ ಸಿನಿಮಾದ ಬಿಡುಗಡೆ ದಿನಾಂಕವನ್ನು ಚಿತ್ರತಂಡ ಅಧಿಕೃತವಾಗಿ ಘೋಷಿಸಿದ್ದು, ಪವನ್ ಅಭಿಮಾನಿಗಳಲ್ಲಿ ಮತ್ತೆ ಉತ್ಸಾಹ ಹೆಚ್ಚಿಸಿದೆ. ನಿರ್ದೇಶಕ ಊಚಿಡ್ಟು ಖುಚಿಟಿಞಚಿಡಿ ಅವರ ಮಾತಿನಂತೆ, ಈ ಸಿನಿಮಾ ಸಂಪೂರ್ಣವಾಗಿ ಪವನ್ ಕಲ್ಯಾಣ್ ಅಭಿಮಾನಿಗಳಿಗಾಗಿ ರೂಪುಗೊಂಡ ಎಂಟರ್‌ಟೈನರ್ ಆಗಿದೆ.

'ಉಸ್ತಾದ್ ಭಗತ್ ಸಿಂಗ್' ಸಿನಿಮಾದಲ್ಲಿ ಪವನ್ ಕಲ್ಯಾಣ್‌ಗೆ ನಾಯಕಿಯಾಗಿ ಕನ್ನಡತಿ ನಟಿಸಿದ್ದಾರೆ. ಈ ಸಿನಿಮಾ ಮಾರ್ಚ್ 23ರಂದು ವಿಶ್ವದಾದ್ಯಂತ ಬಿಡುಗಡೆಯಾಗಲಿದೆ. ಇದೇ ಸಮಯದಲ್ಲಿ ಕನ್ನಡದ ಖಿಂಥುಖಿ ಮತ್ತು ಹಿಂದಿಯ ಆುಣಡಿಚಿಟಿಜುಚಿಡಿ 2 ಸಿನಿಮಾಗಳ ಬಿಡುಗಡೆ ಬಳಿಕ ಕೇವಲ ನಾಲ್ಕು ದಿನಗಳ ಅಂತರದಲ್ಲಿ 'ಉಸ್ತಾದ್ ಭಗತ್ ಸಿಂಗ್' ತೆರೆಗೆ ಬರಲಿದೆ.


ಸಿನಿಮಾದಲ್ಲಿ ಪವನ್ ಕಲ್ಯಾಣ್ ಪೊಲೀಸ್ ಅಧಿಕಾರಿ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಪಾತ್ರವು ಪವನ್ ಅವರ ಹಿಂದಿನ ಸೂಪರ್‌ಹಿಟ್ ಸಿನಿಮಾವಾದ ಚಿತ್ರದ ಐಕಾನಿಕ್ ಕ್ಯಾರಕ್ಟರ್‌ನಿಂದ ಪ್ರೇರಣೆ ಪಡೆದಿದೆ ಎನ್ನಲಾಗಿದೆ. 'ಗಬ್ಬರ್ ಸಿಂಗ್'ನಲ್ಲಿ ಪವನ್ ಕಲ್ಯಾಣ್ ಅಭಿನಯಿಸಿದ್ದ ಶೈಲಿ, ಡೈಲಾಗ್ ಡೆಲಿವರಿ ಮತ್ತು ಪೊಲೀಸ್ ಪಾತ್ರವು ಅಪಾರ ಜನಪ್ರಿಯತೆ ಪಡೆದಿದ್ದುದರಿಂದ, ಅದೇ ಎನರ್ಜಿಯನ್ನು 'ಉಸ್ತಾದ್ ಭಗತ್ ಸಿಂಗ್'ನಲ್ಲಿ ಮತ್ತೆ ತರಲು ನಿರ್ದೇಶಕ ಹರೀಶ್ ಶಂಕರ್ ಪ್ರಯತ್ನಿಸಿದ್ದಾರೆ.

ಗಮನಾರ್ಹ ಅಂಶವೆಂದರೆ, ಪವನ್ ಕಲ್ಯಾಣ್ ಉಪ ಮುಖ್ಯಮಂತ್ರಿ ಆಗುವ ಮೊದಲುಲೇ 'ಉಸ್ತಾದ್ ಭಗತ್ ಸಿಂಗ್' ಸಿನಿಮಾದ ಚಿತ್ರೀಕರಣ ಆರಂಭವಾಗಿತ್ತು. ಆದರೆ ಅವರು ರಾಜಕೀಯದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡ ಕಾರಣ ಚಿತ್ರೀಕರಣವನ್ನು ಮಧ್ಯದಲ್ಲಿ ಸ್ಥಗಿತಗೊಳಿಸಲಾಗಿತ್ತು. ಬಳಿಕ ಡಿಸಿಎಂ ಆಗಿ ಆಡಳಿತದ ಹೊಣೆಗಾರಿಕೆಗಳನ್ನು ನಿಭಾಯಿಸುತ್ತಲೇ, ಸಮಯ ಕಂಡುಕೊಂಡು ಪವನ್ ಕಲ್ಯಾಣ್ ಸಿನಿಮಾದ ಚಿತ್ರೀಕರಣವನ್ನು ಪೂರ್ಣಗೊಳಿಸಿದ್ದಾರೆ.

ಅಷ್ಟೇ ಅಲ್ಲದೆ, ಹಾಡುಗಳ ಚಿತ್ರೀಕರಣಕ್ಕಾಗಿ ವಿದೇಶಕ್ಕೂ ತೆರಳಿ ಕೆಲಸ ಮುಗಿಸಿಕೊಂಡು ಬಂದಿದ್ದಾರೆ. ರಾಜಕೀಯ ಹಾಗೂ ಆಡಳಿತದ ಬ್ಯುಸಿ ವೇಳಾಪಟ್ಟಿಯ ನಡುವೆಯೇ ಸಿನಿಮಾಗೆ ಸಮಯ ಕೊಟ್ಟಿರುವುದು ಅಭಿಮಾನಿಗಳ ಮೆಚ್ಚುಗೆಗೆ ಪಾತ್ರವಾಗಿದೆ.

ಒಟ್ಟಿನಲ್ಲಿ, 'ಉಸ್ತಾದ್ ಭಗತ್ ಸಿಂಗ್' ಸಿನಿಮಾ ಪವನ್ ಕಲ್ಯಾಣ್ ಅವರ ರಾಜಕೀಯ ಮತ್ತು ಸಿನಿ ಜೀವನದ ಮಧ್ಯೆ ಸೇತುವೆಯಂತೆ ಕಾಣುತ್ತಿದ್ದು, ಈ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಯಾವ ಮಟ್ಟದ ದಾಖಲೆ ಬರೆಯಲಿದೆ ಎಂಬುದು ಅಭಿಮಾನಿಗಳ ಕುತೂಹಲವಾಗಿದೆ.

## ಗೀತರಚನೆಯನ್ನು ಕಲಿಸುವುದಕ್ಕೆ ಸಾಧ್ಯವಿಲ್ಲ, ಅದು ಸುಪ್ತಮನಸ್ಸಿನಿಂದ ಬರಬೇಕು: ಜಯಂತ್ ಕಾಯ್ಕಿಣಿ



**ಬೆಂಗಳೂರು:**ಗೀತರಚನೆ ಎನ್ನುವುದು ಕಲಿಯೋದು, ಕಲಿಸೋದಲ್ಲ. ಕನ್ನಡ ಕಾವ್ಯ, ಸಾಹಿತ್ಯ ಓದಬೇಕು. ಜನಜೀವನ ನೋಡಬೇಕು. ಬರವಣಿಗೆ ಎನ್ನುವುದು ನಮ್ಮ ಸುಪ್ತಮನಸ್ಸಿನಿಂದ ಬರುವಂತದ್ದು. ಅದಕ್ಕೆ ಯಾವುದೇ ತರಬೇತಿ, ಕಾರ್ಯಾಗಾರ ಇರುವುದಿಲ್ಲ ಎಂದು ಖ್ಯಾತ ಸಾಹಿತಿ ಮತ್ತು ಚಿತ್ರಸಾಹಿತಿ ಜಯಂತ್ ಕಾಯ್ಕಿಣಿ ಅಭಿಪ್ರಾಯಪಟ್ಟಿದ್ದಾರೆ.

17ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಡೆದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗೀತರಚನೆಯನ್ನು ಕಲಿಸುವುದಕ್ಕಾಗುವುದಿಲ್ಲ. ಕನಸ್ಸಿನಲ್ಲಿ ಒಮ್ಮೊಮ್ಮೆ ಅಮೂರ್ತವಾಗಿ ಏನೇನೋ ಕಾಣುತ್ತದಲ್ಲ, ಗೀತರಚನೆಯೂ ಹಾಗೆಯೇ. ನಿರ್ದೇಶನ, ನಟನೆಯ ತರಹ ಗೀತರಚನೆಗೆ ತರಬೇತಿ ತೆಗೆದುಕೊಳ್ಳುವುದಕ್ಕೆ ಆಗುವುದಿಲ್ಲ. ತರಬೇತಿ ಪಡೆದರೆ, ಜಿಮಿನಂದ ಬಂದ ಒಂದೇ ತರಹ ದೇಹಗಳ ಹಾಗೆ ಕಾಣುತ್ತದೆ. ಬ್ಯೂಟಿ ಪಾರ್ಲರ್‌ನಿಂದ ಬಂದ ವಧುವಿನ ಹಾಗೆ ಎಲ್ಲವೂ ಒಂದೇ ರೀತಿ ಕಾಣುತ್ತದೆ. ನಿಮ್ಮ ಛಾಪು ಮೂಡಿಸಬೇಕೆಂದರೆ ಸ್ವತಂತ್ರವಾಗಿ ಬರೆಯುವುದಕ್ಕೆ ಕಲಿಯಬೇಕು ಎಂದು ಹೇಳಿದರು.

ಕಾಲಕ್ಕೆ ತಕ್ಕ ಹಾಗೆ ಬದಲಾಗುತ್ತಿರಬೇಕು. ಹಳೆಯದೆಲ್ಲಾ ಚೆನ್ನಾಗಿತ್ತು, ಈಗ ಚೆನ್ನಾಗಿಲ್ಲ ಎನ್ನುವುದು ತಪ್ಪು. ಅಂದರೆ ನಾವು ಸಹ ಮೊದಲ ಹಾಗಿಲ್ಲ ಎಂದರ್ಥ. ಎಲ್ಲಾ ಕಡೆ ಸಾಕಷ್ಟು ಬದಲಾವಣೆಗಳಾಗಿವೆ. ಮೊದಲು ನಮ್ಮೂರಿನಲ್ಲಿ ಸಾಕಷ್ಟು ಹಿರಿಯರಿದ್ದರು. ಈಗ ನಾನೇ ಹಿರಿಯ ಎನ್ನುವಂತಾಗಿದೆ. ಸಮಯ ಬದಲಾಗುತ್ತಿರುತ್ತದೆ. ತಂತ್ರಜ್ಞಾನ ಬೆಳೆಯುತ್ತಿದೆ. ನಾವು ಸಹ ಬದಲಾಗಬೇಕಾಗುತ್ತದೆ. ಹಳೆಯದೇ ಚೆನ್ನಾಗಿತ್ತು, ಈಗ ಚೆನ್ನಾಗಿಲ್ಲ ಎನ್ನುವುದು ತಪ್ಪು ಎಂದು ಹೇಳಿದರು.

ನಾವು ಮೊದಲಿಂದಲೂ ಸಿನಿಮಾ ಹಾಡುಗಳ ಪ್ರೇಮಿ. ನಾವೆಲ್ಲಾ ಹಾಡುಗಳನ್ನು ಗುನುಗಿ ಬೆಳೆದವರು. ಗೊಣಗುವುದಕ್ಕಿಂತ ಗುನುಗುವುದು ಮೇಲು ಎಂದು ನಮ್ಮ ತಂದೆ ಹೇಳುತ್ತಿದ್ದರು. ನಾನು 52ನೇ ವಯಸ್ಸಿಗೆ ಸಿನಿಮಾದಲ್ಲಿ ಗೀತರಚನೆಕಾರನಾದೆ. ಯೌವ್ವನದಲ್ಲಿದ್ದಾಗ ಗಂಭಿರವಾಗಿ ಕೋಟಿತೀರ್ಥ ಅಂತ ಬರೆದೆ. ವಯಸ್ಸಾದ ಮೇಲೆ ಸಿನಿಮಾ ಹಾಡುಗಳನ್ನು ಬರೆಯುವಂತಾಯಿತು ಎಂದರು.

ಆರಂಭದಲ್ಲಿ ಸಿನಿಮಾ ಹಾಡುಗಳನ್ನು ಬರೆಯುವಾಗ ಒಂದು ಉಡಾಫೆ ಇತ್ತು. ಸಿನಿಮಾ ಹಾಡುಗಳನ್ನು ಬರೆಯುವುದು ಬಹಳ ಸುಲಭ ಎಂದು ಭಾವಿಸಿದ್ದೆ. ಹಾಡುಗಳನ್ನು ಬರೆಯುವುದಕ್ಕೆ ಶುರು ಮಾಡಿದ ಮೇಲೆ ಅದರ ಕಷ್ಟ ಗೊತ್ತಾಯ್ತು. ಸಿನಿಮಾದಲ್ಲಿ ಟ್ಯೂನ್ ಹಾಕಿದ ಮೇಲೆ, ಮೀಟರ್‌ಗೆ ತಕ್ಕ ಹಾಗೆ ಸಾಹಿತ್ಯವನ್ನು ರಚಿಸಲಾಗುತ್ತದೆ. ಅದು ದೊಡ್ಡ ಸವಾಲಾಗಿತ್ತು. ನಮ್ಮಲ್ಲಿ ಕೋಟ್ಯಂತರ ಹಾಡುಗಳಿವೆ. ಅದರಲ್ಲಿ ವಿಭಿನ್ನವಾದುದನ್ನೇನೋ ಬರೆಯಬೇಕು. ಅದರಲ್ಲಿ ಶೇ.97ರಷ್ಟು ಪ್ರೇಮಗೀತೆಗಳು. ಅದರಲ್ಲಿ ವಿಭಿನ್ನವಾಗಿ ಅದೆಷ್ಟು ಬರೆಯೋಕೆ ಸಾಧ್ಯ? ಒಲವು, ನಲಿವು, ಚೆಲುವು, ಹಸಿರು, ಉಸಿರು ಈ ಪದಗಳನ್ನೇ ಪುನಃ ಬಳಸಬೇಕು. ಅದನ್ನು ಹೊರತುಪಡಿಸಿ, ಹೊಸ ಎಕ್ಸ್‌ಪ್ರೆಶನ್ ಸೃಷ್ಟಿಸುವುದು ನಿಜಕ್ಕೂ ಸವಾಲಿನ ಕೆಲಸ ಎಂದು ಹೇಳಿದರು.

ಸಿನಿಮಾಗಳಿಗೆ ಹಾಡುಗಳನ್ನು ಬರೆಯುವುದಕ್ಕೆ ಪ್ರಾರಂಭಿಸಿದ ಮೇಲೆ ಅನುಕೂಲವೇ ಆಯಿತು. ಚಿತ್ರಗೀತೆಗಳನ್ನು ಬರೆಯುವುದಕ್ಕೆ ಪ್ರಾರಂಭಿಸಿದ ಮೇಲೆ, ನಾನು ಸಿನಿಮಾಗೆ ಹೆಚ್ಚು ಬರೆಯುತ್ತಿರುವುದರ ಬಗ್ಗೆ ಹಿತೈಷಿಗಳು ಬೇಸರ ವ್ಯಕ್ತಪಡಿಸಿದರು. ಸಿನಿಮಾ ಹಾಡುಗಳನ್ನು ಬರೆಯುತ್ತಿದ್ದೇನೆ ಎಂದು ನಾನು ಬೇರೆ ಸಾಹಿತ್ಯವನ್ನು ಕಡೆಗಣಿಸಿಲ್ಲ. ನನ್ನ ಬೇರೆ ಮರವಣಿಗೆಯನ್ನು ಮುಂದುವರೆಸಿದ್ದೇನೆ. ಇದರಿಂದ ಅನಾಮಿಕ ಶ್ರೋತೃಗಳು ಹೆಚ್ಚಾಗುವುದರ ಜೊತೆಗೆ ಒಂಥರಾ ಪ್ರಕ್ರಿಯೆ ಶುರುವಾಯ್ತು. ನನ್ನ ಕಥೆ, ಕವನ ಸಂಕಲನಗಳನ್ನು ಓದದ ಬಹಳಷ್ಟು ಹೊಸ ತಲೆಮಾರಿನವರು, ಹಾಡುಗಳನ್ನು ಕೇಳಿ ಇಷ್ಟಪಟ್ಟು, ನನ್ನ ಪುಸ್ತಕಗಳನ್ನು ಕೊಂಡು ಓದಿದರು. ಇದರಿಂದ ನನ್ನ ಪುಸ್ತಕಗಳ ಮರುಮುದ್ರಣವಾದಂತಾಯಿತು. ವ್ಯಕ್ತ, ಶ್ರಾವ್ಯ ಮತ್ತು ದೃಶ್ಯ ಹೀಗೆ ಮೂರೂ ಗುಣಗಳಿರುವ ಒಂದು ಅಪರೂಪದ ಮಾಧ್ಯಮ ಸಿನಿಮಾ. ಸಿನಿಮಾದಲ್ಲಿ ವ್ಯಕ್ತ, ಶ್ರಾವ್ಯ ಮತ್ತು ದೃಶ್ಯ ಎಂಬ ಮೂರೂ ಗುಣಗಳೂ ಇವೆ. ಒಬ್ಬ ನಿರ್ದೇಶಕನಿಗೆ ಇದರ ಅರಿವು ಮತ್ತು ಹಿಡಿತವಿದ್ದರೆ, ತೆರೆಯ ಮೇಲೆ ಅದ್ಭುತವಾದುದನ್ನು ಸೃಷ್ಟಿಸಬಹುದು ಎಂದರು.

ನನಗೆ ಸಿನಿಮಾ ಆಸಕ್ತಿ ಬಾಲ್ಯದಲ್ಲೇ ಹುಟ್ಟಿತ್ತು. ಅದಕ್ಕೆ ಮೂಲ ಕಾರಣ ನಮ್ಮೂರಿನ ಟೂರಿಂಗ್ ಟಾಕೀಸ್. ಬಾಲ್ಯದಲ್ಲಿ ಕಠಾರಿ ವೀರ, ಬೀದಿ ಬಸವಣ್ಣ ಚೂರಿ ಚಿಕ್ಕಣ್ಣ ಚಂದವಳ್ಳಿಯ ತೋಟ ಮುಂತಾದ ಚಿತ್ರಗಳನ್ನು ನೋಡಿ ಬೆಳೆದಂತೆ. ಜಾವೇದ್ ಅಖ್ತರ್ ಅವರು ಹೇಳಿದಂತೆ ಸಿನಿಮಾನೇ ನಮ್ಮ ಧರ್ಮ. ಹಲವು ಆದರ್ಶ ಗುಣಗಳನ್ನು ಸಿನಿಮಾದಿಂದ ನೋಡಿ ಕಲಿತವರು ನಾವು. ದೀವಾರ್ ಚಿತ್ರದಲ್ಲಿ ಬರುವ ಮೇರೇ ಪಾಸ್ ಮಎನ್ನುವಂತೆ, ನನ್ನ ಹತ್ತಿರ ಏನಿದೆ ಎಂದು ಕೇಳಿದರೆ, ಮೇರೆ ಪಾಸ್ ಸಿನಿಮಾ ಹೇ ಎನ್ನುತ್ತೇನೆ. ಭಾರತದಲ್ಲಿ ನಾವು ಸಿನಿಮಾದ ಜೊತೆಗೆ ಬೆರೆತು ಹೋಗಿದ್ದೇವೆ ಎಂದು ತಿಳಿಸಿದರು.

ಇತ್ತೀಚಿನ ವರ್ಷಗಳಲ್ಲಿ ಪೊನ್ನಿಯನ್ ಸೆಲ್ವನ್ ಚಿತ್ರದ ಕನ್ನಡ ಡಬ್ಬಿಂಗ್ ಅವತರಣಿಕೆಗೆ ಸಾಹಿತ್ಯ ರಚಿಸಿದ್ದು ಸವಾಲಿನ ಕೆಲಸವಾಗಿತ್ತು. ಎ.ಆರ್.ರೆಹಮಾನ್ ಸಂಗೀತ ನಿರ್ದೇಶನದ 'ಪೊನ್ನಿಯನ್ ಸೆಲ್ವನ್ ಸಿನಿಮಾದ ಎರಡೂ ಭಾಗಗಳು ಸೇರಿ 14 ಹಾಡುಗಳಿವೆ. ನಾನು ಭಾಷಾಂತರ ಮಾಡುವುದಿಲ್ಲ, ಸ್ವಂತವಾಗಿ ಬರೆಯುವುದಕ್ಕೆ ಅವಕಾಶ ಕೊಟ್ಟರೆ ಬರೆಯುವುದಾಗಿ ನಿರ್ದೇಶಕ ಮಣಿರತ್ನಂ ಅವರಿಗೆ ಹೇಳಿದ್ದೆ. ಅವರು ಸಹ ಸನ್ನಿವೇಶ ಹೇಳಿ, ಅದಕ್ಕೆ ಪೂರಕವಾಗಿ ಬರೆಯುವುದಕ್ಕೆ ಸಂಪೂರ್ಣ ಸ್ವಾತಂತ್ರ್ಯ ಕೊಟ್ಟರು. ಕನ್ನಡದಲ್ಲಿ ಪ್ರೀತಿ, ಪ್ರೇಮ ಎನ್ನಲು ತುಟಿಗಳನ್ನು ತಾಗಿಸಬೇಕು. ತಮಿಳಿನಲ್ಲಿ 'ಕಾದಲ್ ಎನ್ನುವಾಗ ತುಟಿಗಳೇ ತಾಗುವುದಿಲ್ಲ. ತುಟಿಗಳು ಸೇರಿಸದೆ ಪ್ರೀತಿ ಹೇಗೆ ಮಾಡುತ್ತೀರಿ ಎಂದು ಮಣಿರತ್ನಂ ಅವರನ್ನು ತಮಾಷೆ ಮಾಡಿದ್ದಾಗಿ ನೆನಪಿಸಿಕೊಂಡರು. ಈ ಕಾರ್ಯಕ್ರಮವನ್ನು ಪ್ರಶಾಂತ್ ಪಂಡಿತ್ ನಡೆಸಿಕೊಟ್ಟರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.